# ವಿಜಯ ಕಾಲ

ಪ್ರಧಾನ ಸಂಪಾದಕ: ಕೆ. ದೀಪಕ್

ಓದುಗರ ಒಡಲಾಳ

ಬೆಳಗಿನ ಕನ್ನಡ ದಿನಪತ್ರಿಕೆ

ಮೈಸೂರು | ಚಾಮರಾಜನಗರ | ಮಂಡ್ಯ | ಬೆಂಗಳೂರು

RNI:KARKAN/2017/74098 | ಸಂಪುಟ: 08 | ಸಂಚಿಕೆ: 50 | ಭಾನುವಾರ 28 ಡಿಸೆಂಬರ್ 2025 | ದೂರವಾಣಿ – 9741511340 – 8123436767 | vijayakaalamysuru@gmail.com | ಪುಟ–4 | ರೂ. 2







# ನರೇಗಾ ಉಳಿಸಿ, ಮತಗಳ್ಳತನ ಅಳಿಸಿ

**ನವದೆಹಲಿಯಲ್ಲಿ ನಡೆದ ಸಿಡಬ್ಲ್ಯುಸಿ ಸಭೆಯಲ್ಲಿ ಅಭಿಯಾನಕ್ಕೆ ನಿರ್ಧಾರ**

**ಕರ್ನಾಟಕ ರಾಜ್ಯದ ನಾಯಕತ್ವ ಬದಲಾವಣೆ ಕುರಿತು ನಡೆಯದ ಚರ್ಚೆ**



**ತೀವ್ರ ಕುತೂಹಲ ಕೆರಳಿಸಿದ್ದ ದೆಹಲಿಯ ಸಿಡಬ್ಲ್ಯುಸಿ ಅಧಿವೇಶನದಲ್ಲಿ ಕೇಂದ್ರ ಸರಕಾರ ಸರ್ವಾಧಿಕಾರಿ ಧೋರಣೆಯ ಬಗ್ಗೆ ವಿಸ್ತೃತ ಚರ್ಚೆ ನಡೆದಿದೆ. ನರೇಗಾ ಹೆಸರು ಬದಲಾವಣೆ, ಯೋಜನೆಯ ಸ್ವರೂಪ ರದ್ದು ಪಡಿಸಿರುವ ಬಗ್ಗೆ ತೀವ್ರ ಆಕ್ಷೇಪ ವ್ಯಕ್ತವಾಗಿದೆ. ಪ್ರಜಾಪ್ರಭುತ್ವಕ್ಕೆ ಮಾರಕವಾಗಿರುವ ಮತಗಳ್ಳತನದ ವಿರುದ್ಧ ಜನಜಾಗೃತಿ ಮೂಡಿಸುವ ಕುರಿತು ಮಾತುಕತೆ ನಡೆದಿದೆ. ಮುಂದಿನ ವರ್ಷ ಬಹುರಾಜ್ಯಗಳಿಗೆ ನಡೆಯುವ ವಿಧಾನಸಭಾ ಚುನಾವಣೆಗೆ ಪಕ್ಷವನ್ನು ಕಾರ್ಯಪ್ರವೃತ್ತಗೊಳಿಸಲು ನಿರ್ಧರಿಸಲಾಗಿದೆ.**

ನವದೆಹಲಿ: ತೀವ್ರ ಕುತೂಹಲ ಕೆರಳಿಸಿದ್ದ ಕಾಂಗ್ರೆಸ್ ಕಾರ್ಯಕಾರಿ ಸಮಿತಿ (ಡಿಡಬ್ಲ್ಯೂಸಿ)ಯ ವಿಸ್ತೃತ ಅಧಿವೇಶನದಲ್ಲಿ ಪ್ರಮುಖವಾಗಿ ಬಿಜೆಪಿ ನೇತೃತ್ವದ ಎನ್‌ಡಿಎ ಸರಕಾರವು ಈ ಹಿಂದೆ ಯುಪಿಎ ಸರಕಾರದ ಕಾಲದಲ್ಲಿ ಜಾರಿಗೆ ತಂದಿದ್ದ ಮಹಾತ್ಮಾ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಕಾಯ್ದೆಯ ಹೆಸರು ಬದಲಾಯಿಸಿರುವುದು ಮಾತ್ರವಲ್ಲ, ಯೋಜನೆಯ ಮುಖ್ಯ ಧ್ಯೇಯವನ್ನೇ ಮರೆಮಾಚಿ ನಿಷ್ಕ್ರಿಯೆಗೊಳಿಸುತ್ತಿರುವ ಬಗ್ಗೆ ಸುದೀರ್ಘ ಚರ್ಚೆ ನಡೆಯಿತು.

ಈ ಹಿನ್ನಲ್ಲೆಯಲ್ಲಿ ಜನವರಿ 5ರಿಂದ ದೇಶಾದ್ಯಂತ ನರೇಗಾ ಬಚಾವೋ ಅಭಿಯಾನ ನಡೆಸಲು ಕಾಂಗ್ರೆಸ್ ಕಾರ್ಯಕಾರಿ ಸಮಿತಿ ಸಭೆಯಲ್ಲಿ ನಿರ್ಧರಿಸಲಾಗಿದೆ ಎಂದು ಸಭೆಯ ಬಳಿಕ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ತಿಳಿಸಿದರು.

ನರೇಗಾ ಹೆಸರನ್ನು ವಿಕಸಿತ ಭಾರತ್–ಗ್ಯಾರಂಟಿ ಫಾರ್ ರೋಜ್‌ಗಾರ್ ಮತ್ತು ಅಜೀವಿಕಾ ಮಿಷನ್ (ಗ್ರಾಮೀಣ) ಕಾಯ್ದೆ (ವಿಬಿ ಜಿ ರಾಮ್ ಜಿ) ಯೊಂದಿಗೆ ಬದಲಾಯಿಸುವುದು ಈ ಸಭೆಯ ಚರ್ಚೆಯ ಪ್ರಮುಖ ಕೇಂದ್ರ ಬಿಂದುವಾಗಿದೆ. ಇತ್ತೀಚೆಗೆ ಮುಕ್ತಾಯಗೊಂಡ ಸಂಸತ್ತಿನ ಚಳಿಗಾಲದ ಅಧಿವೇಶನದಲ್ಲಿ ಜಿ ರಾಮ್ ಜಿ ಮಸೂದೆಯನ್ನು ಅಂಗೀಕರಿಸಲಾಯಿತು ಮತ್ತು ಅಂದಿನಿಂದ ಅಧ್ಯಕ್ಷೆ ದ್ರೌಪದಿ ಮುರ್ಮು ಅವರ ಒಪ್ಪಿಗೆಯನ್ನು ಪಡೆದಿದೆ. ನರೇಗಾ ಹೆಸರು ಬದಲಾವಣೆ ಬಗ್ಗೆ ಸಾರ್ವಜನಿಕರ ಕೋಪ ಹೆಚ್ಚುತ್ತಿದೆ ಮತ್ತು ಸರ್ಕಾರ ಪರಿಣಾಮಗಳನ್ನು ಎದುರಿಸಬೇಕಾಗುತ್ತದೆ ಎಂದು ಎಚ್ಚರಿಸಿದರು.

ಹೊಸ ಕಾನೂನನ್ನು ಸಮಾಲೋಚನೆಯಿಲ್ಲದೆ ತೆಗೆದುಕೊಂಡ "ಏಕಪಕ್ಷೀಯ ನಿರ್ಧಾರ" ಎಂದು ಅವರು ಟೀಕಿಸಿದ್ದಾರೆ. ಈ ಯೋಜನೆಗೆ ಈಗ ಕೇಂದ್ರ ಮತ್ತು ರಾಜ್ಯಗಳು ಜಂಟಿಯಾಗಿ 60:40 ಅನುಪಾತದಲ್ಲಿ ಹಣವನ್ನು ನೀಡಬೇಕಾಗಿರುವುದರಿಂದ ಇದು ರಾಜ್ಯಗಳ ಮೇಲೆ ಹೆಚ್ಚುವರಿ ಆರ್ಥಿಕ ಹೊರೆಯನ್ನು ಹೇರುತ್ತದೆ ಎಂದು ಅವರು ಹೇಳಿದರು.

ಹೊಸ ವರ್ಷ ಜನವರಿ 5ರಿಂದ ದೇಶಾದ್ಯಂತ ನರೇಗಾ ಬಚಾವೋ ಅಭಿಯಾನವನ್ನು ಪ್ರಾರಂಭಿಸಲು ನಾವು ನಿರ್ಣಯವನ್ನು ಅಂಗೀಕರಿಸಿದ್ದೇವೆ ಎಂದು ಖರ್ಗೆ ಘೋಷಿಸಿದರು, ರದ್ದತಿಯ ವಿರುದ್ಧ ಕಾಂಗ್ರೆಸ್ ರಾಷ್ಟ್ರವ್ಯಾಪಿ ಪ್ರತಿಭಟನೆಯನ್ನು ಪ್ರಾರಂಭಿಸಲಿದೆ . ಉದ್ಯೋಗ ಖಾತರಿ ಕಾರ್ಯಕ್ರಮದಿಂದ ಮಹಾತ್ಮ ಗಾಂಧಿಯವರ ಹೆಸರನ್ನು ಅಳಿಸಿಹಾಕುವ ಮತ್ತು ಕಾರ್ಮಿಕರ ಹಕ್ಕುಗಳನ್ನು ಪುಟ 02

### ನಾಯಕತ್ವ ಬದಲಾವಣೆ ಚರ್ಚೆ ಇಲ್ಲ

ನವದೆಹಲಿ: ಕರ್ನಾಟಕ ರಾಜ್ಯದಲ್ಲಿ ಕಳೆದ ಎರಡು–ಮೂರು ತಿಂಗಳುಗಳಿಂದ ನಡೆಯುತ್ತಿರುವ ನಾಯಕತ್ವ ಬದಲಾವಣೆ ವಿಷಯ ಇಂದಿನ ಅಧಿವೇಶನದಲ್ಲಿ ಚರ್ಚೆಗೆ ಬಂದಿಲ್ಲ. ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಬಣಗಳು ನಾಯಕತ್ವ ಕುರಿತು ಹಲವು ದಿನಗಳಿಂದ ನೀಡುತ್ತಿರುವ ಹೇಳಿಕೆಗೆ ಕಾಂಗ್ರೆಸ್ ಮಣೆ ಹಾಕಿಲ್ಲ. ಆಮೂಲಕ ಕರ್ನಾಟಕದಲ್ಲಿ ಮುಖ್ಯಮಂತ್ರಿ ಬದಲಾವಣೆ ಪ್ರಸ್ತಾವನೆ ನೆನಗುದಿಗೆ ಬಿದ್ದಂತ್ತಾಗಿದೆ.

> “ ಮುಂದಿನ ವರ್ಷ ನಡೆಯಲಿರುವ ಅಸ್ಸಾಂ, ಕೇರಳ, ಪಶ್ಚಿಮ ಬಂಗಾಳ, ತಮಿಳುನಾಡು ಮತ್ತು ಪುದುಚೇರಿಯಲ್ಲಿ ನಡೆಯಲಿರುವ ವಿಧಾನಸಭಾ ಚುನಾವಣೆಗಳಿಗೆ ಮುಂಚಿತವಾಗಿ ಪಕ್ಷದಲ್ಲಿ ನರೇಗಾ ಬದಲಾವಣೆ ಮತ್ತು ಮತಗಳ್ಳತನ ವಿಷಯಗಳ ಚರ್ಚೆ ನಡೆದು, ಚುನಾವಣಾ ಕಾರ್ಯತಂತ್ರ, ಸಾಂಸ್ಥಿಕ ಸಿದ್ಧತೆ ಮತ್ತು ರಾಜಕೀಯ ಸಂದೇಶ ಕಳುಹಿಸುವಿಕೆಯ ಕುರಿತು ನಾಯಕರು ಚರ್ಚಿಸುತ್ತಾರೆ
>
> **– ಮಲ್ಲಿಕಾರ್ಜುನ ಖರ್ಗೆ, ಎಐಸಿಸಿ ಅಧ್ಯಕ್ಷರು.**

## ಸಾಲು ಸುದ್ದಿ

### ಹುಲಿ ದಾಳಿಗೆ ಅರಣ್ಯ ಸಿಬ್ಬಂದಿ ಬಲಿ

ಗುಂಡ್ಲುಪೇಟೆ:– ತಾಲ್ಲೂಕಿನ ಬಂಡೀಪುರ ಅರಣ್ಯ ಇಲಾಖೆಯ ಮರಳಳ್ಳ ಕ್ಯಾಂಪ್ ಬಳಿ ಕರ್ತವ್ಯ ನಿರ್ವಹಿಸುತಿದ್ದ ಸಣ್ಣಹೈದ( 55) ಹುಲಿ ದಾಳಿಗೆ ಬಲಿಯಾಗಿರುವ ಘಟನೆ ನಡೆದಿದೆ.



ಅನೇಕ ವರ್ಷಗಳಿಂದ ಅರಣ್ಯ ಇಲಾಖೆಯಲ್ಲಿ ಎಂ.ಆರ್ ನೌಕರನಾಗಿ ಕೆಲಸ ನಿರ್ವಹಿಸುತಿದ್ದ ಎನ್ನಲಾಗಿದೆ.

ಬೆಳಿಗ್ಗೆ ಕ್ಯಾಂಪ್ ನಲ್ಲಿ ತಿಂಡಿ ತಿಂದು ಹೊರ ಬಂದಿದ್ದಾರೆ ಕ್ಯಾಂಪ್ ನಿಂದ 500 ಮೀಟರ್ ಅಂತರದಲ್ಲಿ ಸಾವನ್ನಪ್ಪಿದ್ದಾರೆ. ಬಂಡೀಪುರ ಮರಳಹಳ್ಳ ಕ್ಯಾಂಪ್ ಬಳಿ ಗಸ್ತು ತಿರುಗುತ್ತಿದ್ದ ವೇಳೆ ವಾಚರ್ ಮೇಲೆ ಹುಲಿ ದಾಳಿ ನಡೆಸಿದೆ ಎನ್ನಲಾಗಿದೆ.

ಮೃತ ಸಣ್ಣಹೈದ ಹುಣಸೂರು ಮೂಲದ ನೇರಳೆಕುಪ್ಪಿ ಎಂಬ ಗ್ರಾಮದವರಾಗಿದ್ದು ಮೃತನಿಗೆ ಪತ್ನಿ ಹಾಗೂ ಐವರು ಮಕ್ಕಳಿದ್ದು ಒಬ್ಬ ಪುತ್ರ ಅರಣ್ಯ ಇಲಾಖೆಯಲ್ಲಿಯೇ ಕರ್ತವ್ಯ ನಿರ್ವಹಿಸುತಿದ್ದಾರೆ.

ಘಟನಾ ಸ್ಥಳಕ್ಕೆ ಅರಣ್ಯ ಇಲಾಖೆ ಅಧಿಕಾರಿಗಳು ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ಅರಣ್ಯ ಇಲಾಖೆಯಿಂದ ಮೃತ ನೌಕರನ ಕುಟುಂಬಕ್ಕೆ 45 ಲಕ್ಷ ಪರಿಹಾರ ನೀಡುವುದಾಗಿ ಬಂಡೀಪುರ ವಲಯಾಧಿಕಾರಿ ಮಹದೇವ್ ತಿಳಿಸಿದರು.

### ಅರಸು ದಾಖಲು ಸರಿಗಟ್ಟಿದ ಸಿದ್ದರಾಮಯ್ಯ


ಬೆಂಗಳೂರು: ಮಾಜಿ ಮುಖ್ಯಮಂತ್ರಿ ದಿವಂಗತ ದೇವರಾಜ ಅರಸು ಅವರ ದಾಖಲೆಯನ್ನು ಮುರಿದು ದೀರ್ಘಾವಧಿ ಕಾಲ ಆಡಳಿತ ನಡೆಸಿದ ಕರ್ನಾಟಕದ ಮುಖ್ಯಮಂತ್ರಿ ಎಂಬ ದಾಖಲೆಯನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಬರೆಯುತ್ತಿದ್ದಾರೆ. ಈ ಹಿನ್ನೆಲೆಯಲ್ಲಿ ಅವರ ಬೆಂಬಲಿಗರು ವಿಧವಿಧ ಸಂಭ್ರಮಾಚರಣೆಗೆ ಸಿದ್ಧತೆ ಮಾಡಿಕೊಳ್ಳುತ್ತಿದ್ದಾರೆ.

ಈ ಸಂಭ್ರಮದ ಭಾಗವಾಗಿ ಬೆಂಗಳೂರಿನಲ್ಲಿ ಜನವರಿ 6ರಂದು ಅಹಿಂದ ಯುವ ಸಮುದಾಯ ನಾಟಿಕೋಳಿ ಔತಣಕೂಟವನ್ನು ಹಮ್ಮಿಕೊಂಡಿದೆ. ಈ ಕಾರ್ಯಕ್ರಮದ ಪೋಸ್ಟರ್ ಅನ್ನು ವಿಧಾನ ಪರಿಷತ್ತಿನ ಸದಸ್ಯ ಬಿ.ಕೆ.ಹರಿಪ್ರಸಾದ್ ಪುಟ 02

**ಸಂಪುಟ ಪುನರ್ ರಚನೆ**

## ಸಂಕ್ರಾಂತಿ ಬಳಿಕ ಸಿದ್ದರಾಮಯ್ಯ ನಿರ್ಧಾರ

ನವದೆಹಲಿ: ಸಂಕ್ರಾಂತಿ ಮುಗಿದ ಬಳಿಕ ಹೈಕಮಾಂಡ್ ನಾಯಕರನ್ನು ಭೇಟಿ ಮಾಡಿ ಸಚಿವ ಸಂಪುಟ ಪುನರ್ ರಚನೆ ಬಗ್ಗೆ ಚರ್ಚಿಸಲು ಮುಖ್ಯಮಂತ್ರಿ ಸಿದ್ದರಾಮಯ್ಯ ನಿರ್ಧರಿಸಿದ್ದಾರೆ.



ಕಾಂಗ್ರೆಸ್ ಕಾರ್ಯಕಾರಿ ಸಮಿತಿ ಸಭೆಯಲ್ಲಿ ಭಾಗವಹಿಸಲು ದೆಹಲಿಗೆ ಬಂದ ಸಿದ್ದರಾಮಯ್ಯ ಅವರಿಗೆ ರಾಜ್ಯ ರಾಜಕಾರಣದ ಬಗ್ಗೆ ಹೈಕಮಾಂಡ್ ನಾಯಕರ ಜತೆಗೆ ಪ್ರತ್ಯೇಕವಾಗಿ ಮಾತುಕತೆ ಮಾಡಲು ಸಾಧ್ಯವಾಗಿಲ್ಲ. ಅವಕಾಶ ಸಿಕ್ಕರೆ ಸಚಿವ ಸಂಪುಟ ವಿಸ್ತರಣೆ ಅಥವಾ ಪುನರ್ ರಚನೆ ಬಗ್ಗೆ ರಾಹುಲ್ ಅವರೊಂದಿಗೆ ಚರ್ಚಿಸಲು ಮುಖ್ಯಮಂತ್ರಿ ಬಯಸಿದ್ದರು.

ರಾಹುಲ್ ಗಾಂಧಿ ಅವರು ಭಾನುವಾರ ವಿದೇಶ ಪ್ರವಾಸಕ್ಕೆ ತೆರಳಲಿದ್ದಾರೆ. ಅವರು ಜನವರಿ 8ಕ್ಕೆ ವಾಪಸಾಗಲಿದ್ದಾರೆ. ಕಾರ್ಯಕಾರಿ ಸಮಿತಿ ಸಭೆಯ ಬಳಿಕ ನಗರಾಭಿವೃದ್ಧಿ ಸಚಿವ ಬೈರತಿ ಸುರೇಶ್, ಸಮಾಜ ಕಲ್ಯಾಣ ಸಚಿವ ಎಚ್.ಸಿ.ಮಹದೇವಪ್ಪ ಅವರೊಂದಿಗೆ ಸಮಾಲೋಚಿಸಿದ ಸಿದ್ದರಾಮಯ್ಯ, ರಾಹುಲ್ ಅವರು ಜನವರಿ 8ಕ್ಕೆ ಸ್ವದೇಶಕ್ಕೆ ಮರಳಲಿದ್ದಾರೆ. ಸಂಕ್ರಾಂತಿ ಮುಗಿದ ಬಳಿಕ ದೆಹಲಿಗೆ ಬಂದು ರಾಹುಲ್ ಅವರನ್ನು ಭೇಟಿಯಾಗೋಣ. ಸಂಪುಟ ಪುನರ್ ರಚನೆ ಬಗ್ಗೆ ಅವರಿಂದ ಒಪ್ಪಿಗೆ ಪಡೆಯೋ ಎಂಬುದಾಗಿ ಹೇಳಿದ್ದಾರೆ.

ನವೆಂಬರ್ 15ರಂದು ರಾಷ್ಟ್ರ ರಾಜಧಾನಿಗೆ ಬಂದಿದ್ದ ಸಿದ್ದರಾಮಯ್ಯ ಅವರು ರಾಹುಲ್ ಅವರನ್ನು ಭೇಟಿ ಮಾಡಿ ಚರ್ಚಿಸಿದ್ದರು. ಸಚಿವ ಸಂಪುಟ ಪುನರ್ ರಚನೆ ಸೇರಿದಂತೆ ರಾಜ್ಯದ ವಿಷಯಗಳ ಬಗ್ಗೆ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಪುಟ 02

## ಮಾನ್ಯ ಹೆಸರಿನಲ್ಲಿ ಮರ್ಯಾದೆ ಹತ್ಯೆ ತಡೆ ಕಾಯ್ದೆ ಜಾರಿಗೆ ಆಗ್ರಹ

ಶಿವಮೊಗ್ಗ: ದಲಿತ ಯುವಕನನ್ನು ಮದುವೆಯಾದ ಕಾರಣಕ್ಕೆ 7 ತಿಂಗಳ ಗರ್ಭಿಣಿ ಮಗಳು ಮಾನ್ಯಾಳನ್ನು ಕೊಂದು, ಈಕೆಯ ಪತಿಯ ಕುಟುಂಬದ ಸದಸ್ಯರ ಮೇಲೂ ಮಾರಣಾಂತಿಕ ಹಲ್ಲೆ ನಡೆಸಿದ ಮರ್ಯಾದೆ ಹತ್ಯೆ ಪ್ರಕರಣವನ್ನು ಸರಕಾರ ಗಂಭೀರವಾಗಿ ಪರಿಗಣಿಸಿ ಮಾನ್ಯ ಹೆಸರಿನಲ್ಲಿ ಮರ್ಯಾದೆಗೇಡು ಹತ್ಯೆ ತಡೆ ಕಾಯ್ದೆಯನ್ನು ಜಾರಿಗೆ ತರಬೇಕೆಂದು ಹಿರಿಯ ಪತ್ರಕರ್ತ ಎನ್. ರವಿಕುಮಾರ್ (ಟೆಲೆಕ್ಸ್) ಒತ್ತಾಯಿಸಿದ್ದಾರೆ.



ಮರ್ಯಾದೆ ನೆಪದಲ್ಲಿ ನಡೆಯುವ ಇಂತಹ ಹತ್ಯೆಗಳನ್ನು ತಡೆಗಟ್ಟಲು ಮೃತಪಟ್ಟ ಮಾನ್ಯ ಹೆಸರಿನಲ್ಲಿ ಕಾಯ್ದೆ ರಚಿಸಬೇಕು ಎಂದು ಆಗ್ರಹಿಸಿ ಸಮಾನಮನಸ್ಕರ ಬಳಗ ಸಾಮಾಜಿಕ ಜಾಲತಾಣದಲ್ಲಿ ಆರಂಭಿಸಿರುವ ಸಹಿ ಸಂಗ್ರಹ ಅಭಿಯಾನಕ್ಕೆ ಭಾರಿ ಬೆಂಬಲ ವ್ಯಕ್ತವಾಗಿದೆ. ಪತ್ರಕರ್ತರು, ಸಾಹಿತಿಗಳು ಚಿಂತಕರು ಪ್ರಗತಿಪರ ಸಂಘಟನೆಗಳು ಕೈಜೋಡಿಸಿದ್ದಾರೆ.

ಶಿವಮೊಗ್ಗ ಪ್ರೆಸ್ ಟ್ರಸ್ಟ್‌ನ ಪತ್ರಿಕಾ ಭವನದಲ್ಲಿ ಶನಿವಾರದಂದು ಪತ್ರಕರ್ತ ದೇಶಾದ್ರಿ ಹೊಸಮನೆ ಅವರೊಂದಿಗೆ ಜಂಟಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಹುಬ್ಬಳ್ಳಿಯ ಇನಾಂವೀರಾಪುರದಲ್ಲಿ ದಲಿತ ಯುವಕನನ್ನ ವಿವಾಹವಾದ ಕಾರಣಕ್ಕೆ ಜಾತಿ ಪ್ರತಿಷ್ಠೆಗಾಗಿ ಸ್ವಂತ ಮಗಳನ್ನೇ ಗರ್ಭಿಣಿಯೆಂದು ಲೆಕ್ಕಿಸದೇ ಹತ್ಯೆ ಮಾಡಿರುವುದು ಸಮಾಜದ ಆಶಯಕ್ಕೆ ವಿರುದ್ಧವಾಗಿದೆ. ಇತ್ತೀಚಿನ ವರ್ಷಗಳಲ್ಲಿ ಮರ್ಯಾದಾಗೇಡು ಪ್ರಕರಣಗಳು ಹೆಚ್ಚಾಗುತ್ತಿದ್ದು ಕಾನೂನಿನ ಭಯವೇ ಇಲ್ಲದಂತಾಗಿದೆ ಎಂದು ಕಳವಳ ವ್ಯಕ್ತಪಡಿಸಿದರು.

ಸಿಎಂ ಸಿದ್ದರಾಮಯ್ಯ ಭೇಟಿ–ಮನವಿ ಮರ್ಯಾದಾ ಹತ್ಯೆ ಹೆಸರಿನ ಜಾತಿ ಭಯೋತ್ಪಾದನೆಗೆ ತಡೆಗೆ ಪುಟ 02

**ತಂಗಿಯ ಮರಣದ ಸುದ್ದಿ ಕೇಳಿ**

## ಅಣ್ಣ ಸಾವು

ಮೈಸೂರು: ನಗರದ ಅರಮನೆ ಮುಂಭಾಗ ಬಲೂನ್ ಗ್ಯಾಸ್ ಸಿಲೆಂಡರ್ ಸ್ಪೋಟದಲ್ಲಿ ಗಾಯಗೊಂಡು ನಿನ್ನೆ ಮರಣ ಹೊಂದಿದ ಲಕ್ಷ್ಮೀ ಅವರ ಅಣ್ಣ ಇಂದು ಮೃತಪಟ್ಟಿರುವ ಹೃದಯ ಕಲಕುವ ಘಟನೆ ಜರುಗಿದೆ. ತಂಗಿಯ ಸಾವಿನ ಸುದ್ದಿ ಕೇಳಿ ದಿಗ್ಭ್ರಾಂತರಾದ ಪರಮೇಶ್ ಮೃತಪಟ್ಟ ವ್ಯಕ್ತಿ. ಇವರಿಗೆ 60 ವರ್ಷ ವಯಸ್ಸಾಗಿತ್ತು. 24 ಗಂಟೆಗಳಲ್ಲಿ ತಂಗಿ–ಅಣ್ಣನನ್ನು ಕಳೆದುಕೊಂಡ ಕುಟುಂಬ ಶೋಕ ಸಾಗರದಲ್ಲಿ



ಮುಳುಗಿದೆ.


ಡಿ.25ರಂದು ರಾತ್ರಿ 8.30ರ ವೇಳೆ ಅರಮನೆ ನೋಡಲು ಬಂದಿದ್ದ ನಂಜನಗೂಡು ತಾಲೂಕಿನ ನಿವಾಸಿ ಲಕ್ಷ್ಮೀ ಬಲೂನ್ ಗ್ಯಾಸ್ ಸಿಲೆಂಡರ್ ಸ್ಪೋಟಗೊಂಡ ಪರಿಣಾಮ ಗಂಭೀರವಾಗಿ ಗಾಯಗೊಂಡು ಕೆ.ಆರ್.ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದರು. ಚಿಕಿತ್ಸೆ ಫಲಿಸದೆ ನಿನ್ನೆ ಮೃತಪಟ್ಟಿದ್ದಾರೆ.

ಈ ಘಟನೆಯಲ್ಲಿ ಮೃತರ ಸಂಖ್ಯೆ ಮೂರಕ್ಕೆ ಏರಿದ್ದು, ಗಾಯಗೊಂಡ ಇನ್ನಿಬ್ಬರು ಚಿಕಿತ್ಸೆ ಪಡೆಯುತ್ತಿದ್ದಾರೆ. ಬಲೂನ್ ಮಾರಾಟ ಮಾಡುತ್ತಿದ್ದ ಸಲೀಂ ಎಂಬಾತ ಸ್ಥಳದಲ್ಲೇ ಛಿದ್ರಗೊಂಡು ಮೃತಪಟ್ಟಿದ್ದಾರೆ. ಲಕ್ಷ್ಮೀ ಎಂಬುವರು ಆಸ್ಪತ್ರೆಯಲ್ಲಿ ನಿನ್ನೆ ಕೊನೆಯುಸಿರೆಳೆದರು. ಸದ್ಯ ಸಲೀಂನ ಮೃತ ದೇಹದ ಅಂತ್ಯ ಸಂಸ್ಕಾರ ನಡೆಸಿ ಮೃತದೇಹವನ್ನು ಕುಟುಂಬದ ಸದಸ್ಯರಿಗೆ ಒಪ್ಪಿಸಲಾಗಿದೆ.

ಈನಡುವೆ, ನಿನ್ನೆ ಮೃತಪಟ್ಟ ಲಕ್ಷ್ಮೀಯ ಸುದ್ದಿ ಕೇಳಿದ ಅಣ್ಣ ಪರಮೇಶ್ ಅಘಾತಕ್ಕೆ ಒಳಗಾಗಿ ಮೃತಪಟ್ಟಿದ್ದಾರೆ.

## ಹೊಗೇನಕಲ್ ಜಲಪಾತ ವೀಕ್ಷಣೆಗೆ ಪ್ರವಾಸಿಗರ ಲಗ್ಗೆ

ಹನೂರು:– ಕರ್ನಾಟಕದ ನಯಾಗಾರ ಎಂದೇ ಪ್ರಖ್ಯಾತಿ ಪಡೆದಿರುವ ಹೊಗೇನಕಲ್ ಜಲಪಾತ ನೋಡಲು ತಮಿಳುನಾಡಿನ ಭಾಗದಿಂದ ಪ್ರವಾಸಿಗರ ದಂಡೇ ಬಂದಿದ್ದು ವಾರಾಂತ್ಯದಲ್ಲಿ ಜನಜಂಗುಳಿಯಿಂದ ಕೂಡಿದ್ದು ಇಡೀ ಹೊಗೇನಕಲ್ ಜನಸಾಗರ ತುಂಬಿ ತುಳುಕುತಿತ್ತು.



**ತೆಪ್ಪವಿಹಾರದಲ್ಲಿ ಪ್ರವಾಸಿಗರು:** ರಾಜ್ಯದ ಜಿಲ್ಲೆಯ ತಾಲೂಕಿನ ಗಡಿ ಭಾಗದಲ್ಲಿರುವ ಹೊಗೇನಕಲ್ ಜಲಪಾತ ವೀಕ್ಷಿಸಲು ರಾಜ್ಯದ ನಾನಾ ಭಾಗಗಳಿಂದ ವೀಕೆಂಡ್ ರಜಾ ದಿನಗಳನ್ನು ಕಳೆಯಲು ಪ್ರವಾಸಿಗರು ತಮಿಳುನಾಡಿನಿಂದ ಅಪಾರ ಸಂಖ್ಯೆಯಲ್ಲಿ ಆಗಮಿಸಿದ ಹಿನ್ನೆಲೆಯಲ್ಲಿ ತೆಪ್ಪ ವಿಹಾರಕ್ಕೆ ಅಪಾರ ಸಂಖ್ಯೆಯ ಪ್ರವಾಸಿಗರು ಬಂದ ಹಿನ್ನೆಲೆಯಲ್ಲಿ ಜಲಪಾತ ವೀಕ್ಷಿಸಲು ಮುಗಿಬಿದ್ದರು.

**ವರ್ಷಾಂತ್ಯ ಪ್ರವಾಸಿಗರ ದಂಡು:** ಕರ್ನಾಟಕದ ನಯಾಗರ ಎಂದೇ ಪ್ರಖ್ಯಾತಿ ಪಡೆದಿರುವ ಹೊಗೆನಕಲ್ ಜಲಪಾತವನ್ನು ವೀಕ್ಷಿಸಲು ಮತ್ತು ಅಲ್ಲಿನ ಪ್ರೇಕ್ಷಣೀಯ ಕಲ್ಲು ಬಂಡೆಗಳ ನಡುವೆ ಚಿಮ್ಮುವ ನೀರಿನ ರಭಸ ಜೊತೆಗೆ ಅಲ್ಲಿನ ದೃಶ್ಯ ಕಾವ್ಯವನ್ನು ಕಣ್ತುಂಬಿಕೊಳ್ಳಲು ಅಪಾರ ಸಂಖ್ಯೆಯ ಪ್ರವಾಸಿಗರನ್ನು ತನ್ನತ್ತ ಸೆಳೆಯುತ್ತಿರುವ ಜಲಪಾತದ ಸೌಂದರ್ಯ ವೀಕ್ಷಣೆ ಮಾಡಲು ಜನರು ತುಂಬಿ ತುಳುಕುತ್ತಿದ್ದರು.

ಕಣ್ಮನ ಸೆಳೆಯುವ ತೆಪ್ಪವಿಹಾರ ಪುಟ 02

# ಜಿ ರಾಮ್ ಜಿ ವಿರೋಧಿಸಿ ಪ್ರತಿಭಟನೆ



ಮಂಡ್ಯ:– ಮಹಾತ್ಮ ಗಾಂಧೀಜಿ ಹೆಸರಿನಲ್ಲಿದ್ದ ಮಹಾತ್ಮ ಗಾಂಧಿ ಉದ್ಯೋಗ ಖಾತ್ರಿ ಯೋಜನೆಯನ್ನು ರದ್ದುಗೊಳಿಸಿ ಜಿರಾಮ್ ಜಿ ಹೆಸರಿನಲ್ಲಿ ಯೋಜನೆ ಆರಂಭಿಸಿರುವುದನ್ನು ವಿರೋಧಿಸಿ ಇಲ್ಲಿಗೆ ಸಮೀಪದ ಕ್ಯಾತಘಟ್ಟ ಗ್ರಾ.ಪಂನಲ್ಲಿ ಪ್ರತಿಭಟನೆ ನಡೆಸಿದರು.

ಭಾರತೀನಗರ ಕ್ಯಾತಘಟ್ಟ ಗ್ರಾಮದಲ್ಲಿ ಕೃಷಿ ಕೂಲಿಕಾರರ ಸಂಘದ ರಾಜ್ಯಾಧ್ಯಕ್ಷ ಎಂ. ಪುಟ್ಟಮಾದು ಅವರು ಮಾತನಾಡಿ, ರಾಜ್ಯಾದ್ಯಂತ ಗ್ರಾ.ಪಂಗಳಲ್ಲಿ ಕಪ್ಪು ಬಾವುಟವನ್ನು ಪ್ರದರ್ಶಿಸುವ ಮೂಲಕ ಕೇಂದ್ರ ಸರ್ಕಾರದ ವಿರುದ್ಧ ಪ್ರತಿಭಟನೆ ನಡೆಸಿ ಧಿಕ್ಕಾರ ಕೂಗಲಾಗುತ್ತಿದೆ ಎಂದರು.

ಡಿ.12 ರಂದು ಉದ್ಯೋಗ ಖಾತರಿಯನ್ನು ನಾಶ ಮಾಡುವುದಕ್ಕಾಗಿ ಕೇಂದ್ರ ಮಂತ್ರಿಮಂಡಲ ಭಾಪೂಜಿ ಹೆಸರು ತರುವುದಾಗಿ ಹೇಳಿ ಡಿ.13 ರಂದು ಅದನ್ನು ಅಳಿಸಿಹಾಕಿದ್ದಾರೆ. ವಿಕಸಿತ ಭಾರತ ಜಿರಾಂಜಿ ಎಂದು ಹೆಸರು ನೋಂದಾಯಿಸಿಕೊಂಡು ಸಂಸತ್‌ನಲ್ಲಿ ಬಹುಮತ ಇದೇ ಎಂಬ ಒಂದೇ ಕಾರಣದಿಂಗಾಗಿ ಏಕಮುಖವಾಗಿ ನಿರ್ಣಯಗಳನ್ನು ತೆಗೆದುಕೊಳ್ಳುತ್ತಿದ್ದಾರೆಂದು ಆಕ್ರೋಶ ವ್ಯಕ್ತಪಡಿಸಿದರು.

ಈ ದೇಶವನ್ನು ಕಟ್ಟುವುದರಲ್ಲಿ ಬಹುಮುಖ ಹೋರಾಟ ಮಾಡಿ ಸ್ವಾತಂತ್ರ್ಯ ತಂದ ಮಹಾತ್ಮ ಗಾಂಧಿ ಹೆಸರಿನ ಜಗತ್ತಿಗೆ ಕೂಲಿಕಾರಿಗೆ ಕೆಲಸದ ಹಕ್ಕನ್ನು ನೀಡಿದಂತಹ ಉದ್ಯೋಗ ಖಾತರಿ ಕಾಯ್ದೆಯನ್ನು ನಾಶಪಡಿಸಿ ಅದಕ್ಕೆ ಸಮಾಧಿ ಕಟ್ಟಿದೆ.

ಡಿ.23 ರಂದು ಭಾರತದ ರಾಷ್ಟ್ರಪತಿಗಳು ವಿಕಸಿತ ಭಾರತ ಜಿರಾಂಜಿ ಉದ್ಯೋಗ ಖಾತರಿ ಯೋಜನೆಗೆ ಅಂಕಿತ ಹಾಕಿದ್ದಾರೆ. ರಾಷ್ಟ್ರದ ರಕ್ಷಣೆಗಾಗಿ 32 ಕೋಟಿಗಿಂತ ಹೆಚ್ಚಿರುವ ಕೃಷಿ ಕೂಲಿಕಾರರ ರಕ್ಷಣೆ ಮಾಡುತ್ತಾರೆಂದು ನಿರೀಕ್ಷೆ ಪಟ್ಟಿದ್ದೇವು. ಆದರೆ ರಾಷ್ಟ್ರಪತಿಗಳು ಇದನ್ನು ಗಮನಿಸದೆ ಸಹಿ ಹಾಕಿದ್ದಾರೆ.

ನಮ್ಮ ಜಿಲ್ಲೆಯ ಸಂಸದರಾದ ಮಂಡ್ಯ ಜಿಲ್ಲೆಯ ರೈತರನ್ನು, ಕೂಲಿಕಾರರನ್ನು ಸಭೆ ಕರೆಯದೆ ಸಹಿ ಹಾಕಿರುತ್ತಾರೆ. ಇದು ನೋವಿನ ಸಂಗತಿಯಾಗಿದೆ.

ಅಣ್ಣೂರು ವಲಯ ಸಮಿತಿ ಅಧ್ಯಕ್ಷೆ ಕ್ಯಾತಘಟ್ಟದ ಜಯಮ್ಮ, ಕಾಯಕ ಬಂಧುಗಳಾದ ಸುಧಾಮಣಿ, ಸತೀಶ್, ಮಲ್ಲೇಶ್, ಮುಖಂಡರಾದ ಮಂಗಳಮ್ಮ, ತಾಯಮ್ಮ, ವಿಮಲ, ಚಿಕ್ಕತಾಯಮ್ಮ ಸೇರಿದಂತೆ ಉಪಸ್ಥಿತರಿದ್ದರು.

## ಡಿ.30ರಂದು ವಿಷ್ಣು ಪುಣ್ಯ ದಿನ: ರಾಜ್ಯ ಮಟ್ಟದ ಪದಬಂಧ ಸ್ಪರ್ಧೆ



ಚಾಮರಾಜನಗರ:– ಸಾಹಸ ಸಿಂಹ ಡಾ.ವಿಷ್ಣುವರ್ಧನ್ ರವರ 16ನೇ ವರ್ಷದ ಪುಣ್ಯ ದಿನದ ಅಂಗವಾಗಿ ರಾಜ್ಯ ಮಟ್ಟದ ವಿಷ್ಣು ಪದಬಂಧ ಸ್ಪರ್ಧೆ ಹಾಗೂ ವಿಷ್ಣ ನೆನಪಿನೋತ್ಸವ ಕಾರ್ಯಕ್ರಮವನ್ನು ಡಿ.30ರಂದು ಬೆಳಗ್ಗೆ 11 ನಗರದ ಜೆ.ಎಚ್. ಪಟೇಲ್ ಸಭಾಂಗಣದಲ್ಲಿ ಆಯೋಜನೆ ಮಾಡಲಾಗಿದೆ ಎಂದು ಕನ್ನಡ ನೆಲ ಜಲ ಸಂಸ್ಕೃತಿಕ ವೇದಿಕೆಯ ಅಧ್ಯಕ್ಷ ಉಮ್ಮತ್ತೂರು ಇಂದುಶೇಖರ್ ತಿಳಿಸಿದರು.

ನಗರದ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಭವನದಲ್ಲಿ ಕರೆದಿದ್ದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಕಳೆದ 15 ವರ್ಷಗಳಿಂದ ನಿರಂತರವಾಗಿ ಡಾ.ವಿಷ್ಣುವರ್ಧನ ನೆನಪಿನೋತ್ಸವ ಕಾರ್ಯಕ್ರಮವನ್ನು ಬಹಳ ಅದ್ದೂರಿಯಾಗಿ ಆಚರಣೆ ಮಾಡುತ್ತಿದ್ದೇವೆ.

ಈ ಬಾರಿ ವಿಶೇಷವಾಗಿ ವಿಷ್ಣುವರ್ಧನ ನಟಿಸಿರುವ ಚಲನಚಿತ್ರಗಳನ್ನೊಳಗೊಂಡ ರಾಜ್ಯ ಮಟ್ಟದ ಪದ ಬಂಧ ಸ್ಪರ್ಧೆಯನ್ನು ಆಯೋಜನೆ ಮಾಡಿದ್ದು, ಕಾರ್ಯಕ್ರಮವನ್ನು ಡಿವೈಎಸ್ಪಿ ಸ್ನೇಹಾ ರಾಜ್ ಅವರು ಉದ್ಘಾಟಿಸಲಿದ್ದಾರೆ. ವಿಷ್ಣು ಅವರ ಭಾವಚಿತ್ರಕ್ಕೆ ಚುಡಾ ಅಧ್ಯಕ್ಷ ಮಹಮದ್ ಅಸ್ಗರ್(ಮುನ್ನಾ) ಪುಷ್ಪಾರ್ಚನೆ ಮಾಡಲಿದ್ದಾರೆ.

ಮುಖ್ಯ ಅತಿಥಿಗಳಾಗಿ ಬಜಾಜ್ ಶೋ ರೂಂ ಮಾಲೀಕರು ಹಾಗು ಬಿಜೆಪಿ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಹೊನ್ನಹಳ್ಳಿ ಪಿ. ವೃಷಬೇಂದ್ರಪ್ಪ, ಉದ್ಯಮಿ, ಶ್ರೀನಿಧಿ ಕುದರ್ ಹಾಗೂ ಚಲನಚಿತ್ರ ರಂಗ ಗಣ್ಯರು ಸಹ ಭಾಗವಹಿಸಲಿದ್ದಾರೆ.

ಸಾಂಸ್ಕೃತಿಕ ಚಿಂತಕ ಸುರೇಶ್ ಎನ್. ಋಗ್ವೇದಿ ಅವರು ನುಡಿನಮನ ಸಲ್ಲಿಸಿದ್ದಾರೆ ಎಂದು ಕನ್ನಡ ನೆಲ ಜಲ ಸಾಂಸ್ಕೃತಿಕ ವೇದಿಕೆಯ ಅಧ್ಯಕ್ಷ ಉಮ್ಮತ್ತೂರು ಇಂದುಶೇಖರ್ ಅಧ್ಯಕ್ಷತೆ ವಹಿಸಲಿದ್ದಾರೆ.

ರಾಜ್ಯ ಮಟ್ಟದ ವಿಷ್ಣು ಪದ ಬಂಧ ಸ್ಪರ್ಧೆಯು ಡಿ.30ರ ಮಂಗಳವಾರ ಅದೇ ಸ್ಥಳದಲ್ಲಿ ನಡೆಸಲಾಗುತ್ತದೆ. ರಾಜ್ಯ ಮಟ್ಟದ ವಿಷ್ಣು ಪದಬಂಧ ಸ್ಪರ್ಧೆಯಲ್ಲಿ 15 ಸಾವಿರ ರೂ. ಪ್ರಥಮ, 10 ಸಾವಿರ ರೂ. ದ್ವಿತೀಯ ಹಾಗೂ ಐದು ಸಾವಿರ ರೂ.ಗಳನ್ನು ತೃತೀಯ ಬಹುಮಾನವಾಗಿ ನೀಡಲಾಗುತ್ತದೆ. ಐದು ಮಂದಿಗೆ ಸಮಾಧಾನಕರ ಬಹುಮಾನಗಳಿಗೆ ಎರಡು ಸಾವಿರ ರೂ. ನೀಡಿ ರೂ.ಗಳ ಬಹುಮಾನ, ನೆನಪಿನ ಕಾಣಿಕೆಯನ್ನು ನೀಡಿ ಗೌರವಿಸಲಾಗುವುದು. ಡಿ.29ರ ಸೋಮವಾರ ಸಂಜೆ 5 ಗಂಟೆಯೊಳಗೆ ಅಸಕ್ತರು ನೂರು ರೂ.ಗಳ ಪ್ರವೇಶ ಶುಲ್ಕವನ್ನು ನೀಡಿ, ಹೆಸರು ನೊಂದಾಯಿಸಿಕೊಳ್ಳಬೇಕು ಎಂದು ಉಮ್ಮತ್ತೂರು ಇಂದು ಶೇಖರ್ ತಿಳಿಸಿದರು.

ಈ ಕಾರ್ಯಕ್ರಮಕ್ಕೆ ಹೆಚ್ಚಿನ ಸಂಖ್ಯೆಯಲ್ಲಿ ವಿಷ್ಣು ಅಭಿಮಾನಿಗಳು, ಸಾರ್ವಜನಿಕರು ಆಗಮಿಸಿ, ಯಶಸ್ವಿಗೊಳಿಸಿಕೊಡಬೇಕೆಂದು ವೇದಿಕೆಯ ಅಧ್ಯಕ್ಷ ಉಮ್ಮತ್ತೂರು ಇಂದು ಶೇಖರ್ ಮನವಿ ಮಾಡಿದರು.

ಪತ್ರಿಕಾಗೋಷ್ಠಿಯಲ್ಲಿ ವೇದಿಕೆಯ ಸಂಚಾಲಕರಾದ ಆಲೂರು ಮಲ್ಲು, ಜ. ಸುರೇಶ್‌ನಾಗ್, ಕೂಸಣ್ಣ, ರಾಮಸಮುದ್ರ ವೇಣುಗೋಪಾಲ್, ವಕೀಲ ಮಲ್ಲು, ಅನಂದ ಭಗೀರಥ ಇತರರು ಇದ್ದರು.

## ಪೂರ್ವಿಕರು ಅಪಾರ ಜೀವನಾನುಭವ ಹೊಂದಿದ್ದ ಜ್ಞಾನಿಗಳಾಗಿದ್ದರು: ಕೆಂಪಮ್ಮ

ಮಂಡ್ಯ: ನಮ್ಮ ಪೂರ್ವಿಕರು ವಿದ್ಯಾವಂತರಲ್ಲದಿದ್ದರೂ ಅಪಾರ ಜೀವನಾನುಭವ ಹೊಂದಿದ್ದ ಜ್ಞಾನಿಗಳಾಗಿದ್ದರು ಎಂದು ಜಾನಪದ ಅಕಾಡೆಮಿ ಸದಸ್ಯೆ, ಉಪನ್ಯಾಸಕರೂ ಆದ ಕೆಂಪಮ್ಮ ತಿಳಿಸಿದರು.

ತಾಲ್ಲೂಕಿನ ಸಂತೆಕಸಲಗೆರೆ ಸರ್ಕಾರಿ ಪ್ರೌಢಶಾಲೆಯಲ್ಲಿ ಶಿವಗಂಗಾ ಸಾಂಸ್ಕೃತಿಕ ಯುವಕರ ಸಂಘ ಆಯೋಜಿಸಿದ್ದ 'ಜಾನಪದ ನಮ್ಮ ಜೀವಾಳ'ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು. ಜನಪದೀಯರು ಅಂದು ಆಡಿದ ಗಾದೆ ಮಾತು, ಕಟ್ಟಿದ ಹಾಡುಗಳು ಅನುಭವದ ಆಧಾರದ ಮೇಲೆ ಇದ್ದವು ಸತ್ಯದಿಂದ ಕೂಡಿದ್ದವು, ವೇದಗಳನ್ನು ಮೀರಿಸುವಂತಿದ್ದವು ಎಂದರು.

ಅಜ್ಜಿಯಂದಿರು ಹೇಳುತ್ತಿದ್ದ ಜಾನಪದ ಕಥೆಗಳು ಅತ್ಯಂತ ಸೊಗಸಾಗಿ, ರೋಚಕವಾಗಿದ್ದವು ಅಂತಹ ಕಥೆಗಳನ್ನು ಕೇಳುವ ಭಾಗ್ಯ ಇಂದಿನ ಮಕ್ಕಳಿಗೆ ಇಲ್ಲ ಎಂದರು.

ವಿಕಸನ ಸಂಸ್ಥೆಯ ನಿರ್ದೇಶಕರಾದ ಮಹೇಶ್ ಚಂದ್ರ ಗುರು ಮಾತನಾಡಿ, ವಿದ್ಯಾರ್ಥಿಗಳು ಮಾನವೀಯ ಮೌಲ್ಯಗಳನ್ನು ಬೆಳೆಸಿಕೊಳ್ಳಬೇಕು, ದುರ್ಬಲರಿಗೆ ಸಹಾಯ ಮಾಡುವ, ಅಸಹಾಯಕರನ್ನು ಕೈಹಿಡಿದು ನಡೆಸುವ ಉದಾರತೆ ಮೆರೆಯಬೇಕು, ವಿದ್ಯೆ ಇಂತಹ ಗುಣಗಳನ್ನು ಕಲಿಸಬೇಕು ಎಂದರು.

ಪರಿಚಯ ಪ್ರಕಾಶನದ ಶಿವಕುಮಾರ್ ಆರಾದ್ಯ ಮಾತನಾಡಿ, ಮಕ್ಕಳು ಪಠ್ಯೇತರ ಪುಸ್ತಕಗಳನ್ನ ಓದುವ ಹವ್ಯಾಸ ರೂಢಿಸಿಕೊಳ್ಳಬೇಕು ಆಗ ಮಾತ್ರ ಜ್ಞಾನ ಸಂಪತ್ತು ಬೆಳೆಯಲು ಸಾಧ್ಯ, ಓದು ಬಾಳನ್ನು ಬೆಳಗುವ ಹಣತೆಯಿದ್ದಂತೆ ಎಂದರು.

ವೇದಿಕೆಯಲ್ಲಿ ಕನ್ನಡ ಪರ ಹೋರಾಟಗಾರ ದನುಷ್ ಗೌಡ, ಪತ್ರಕರ್ತ, ಗಾಯಕ ದೇವರಾಜ್ ಕೊಪ್ಪ, ಶಿವಗಂಗಾ ಸಾಂಸ್ಕೃತಿಕ ಯುವಕ ಸಂಘದ ಅಧ್ಯಕ್ಷ ಬಸವರಾಜು ಸಂತೆಕಸಲಗೆರೆ, ಇದೇ ವೇಳೆ ಹನಿಯಂಬಾಡಿ ಶೇಖರ್ ಮತ್ತು ತಂಡದಿಂದ ಜಾನಪದ ಗೀತೆಗಳ ಗಾಯನ ನಡೆಯಿತು, ಕಲಾವಿದರಾದ ರಾಜಣ್ಣ ಸಂತೆಕಸಲಗೆರೆ, ಎಚ್. ಬಿ ರಾಮಕೃಷ್ಣ, ಶಿಕ್ಷಕಿ ರಶ್ಮಿ.ದೇವರಾಜು .ರಾಜು ಸೇರಿದಂತೆ ಇತರೆ ಶಿಕ್ಷಕ ಸಿಬ್ಬಂದಿ ಹಾಜರಿದ್ದರು.



## ಮಾದೇಶ್ವರನ ದರ್ಶನ ಪಡೆದ ಎಂ.ರಾಮಪ್ಪ



ಹನೂರು:– ತಾಲೂಕಿನ ಮಲೆ ಮಾದೇಶ್ವರ ಬೆಟ್ಟಕ್ಕೆ ಕರ್ನಾಟಕ ಭೋವಿ ಅಭಿವೃದ್ಧಿ ನಿಗಮದ ಅಧ್ಯಕ್ಷ ಎಂ ರಾಮಪ್ಪ ಕುಟುಂಬ ಸಮೇತ ಭೇಟಿ ಮಾದೇಶ್ವರನ ದರ್ಶನ ಪಡೆದರು.

ಚಾಮರಾಜನಗರ ಜಿಲ್ಲೆಯ ಹನೂರು ತಾಲೂಕಿನ ಶ್ರೀ ಕ್ಷೇತ್ರ ಮಲೆ ಮಹದೇಶ್ವರ ಬೆಟ್ಟ ಮಾದೇಶ್ವರನ ದರ್ಶನ ಪಡೆಯಲು ಕರ್ನಾಟಕ ಬೋವಿ ಅಭಿವೃದ್ಧಿ ನಿಗಮದ ಅಧ್ಯಕ್ಷರಾದ ಎಂ ರಾಮಪ್ಪ ಹಾಗೂ ಪತ್ನಿ ಜಯಲಕ್ಷ್ಮಿ ಮತ್ತು ಪುತ್ರರಾದ ವಿನಯ ರಾಮ್ ವಿವೇಕ್ ರಾಮ್ ಮತ್ತು ಸೊಸೆ ಚಿನ್ಮಯಿ ಭೇಟಿ ನೀಡಿ ಮಾದೇಶ್ವರನ ದರ್ಶನ ಪಡೆದರು.

**ವಿಶೇಷ ಪೂಜೆ ಸಲ್ಲಿಸಿದ ಅಧ್ಯಕ್ಷರು:** ಚಾಮರಾಜನಗರ ಜಿಲ್ಲೆಗೆ ಅಧ್ಯಕ್ಷರಾದ ಮೊದಲ ಬಾರಿಗೆ ಭೇಟಿ ನೀಡಿದ ಪರಿಣಾಮ ಶ್ರೀ ಕ್ಷೇತ್ರ ಮಲೆ ಮಹದೇಶ್ವರ ಬೆಟ್ಟದ ಒಡೆಯ ಮಲೆ ಮಹದೇಶ್ವರನಿಗೆ ವಿಶೇಷ ಪೂಜೆ ಸಲ್ಲಿಸಿ ಪ್ರಾರ್ಥನೆ ಸಲ್ಲಿಸಿದರು.

ಶ್ರೀ ಕ್ಷೇತ್ರದಲ್ಲಿ ನಡೆಯುವ ಪೂಜಾ ಕಾರ್ಯಕ್ರಮಗಳ ಬಗ್ಗೆ ಹಾಗೂ ನಡೆಯುತ್ತಿರುವ ಅಭಿವೃದ್ಧಿ ಕಾಮಗಾರಿಗಳ ಬಗ್ಗೆ ಮಾಹಿತಿಯನ್ನು ಪಡೆದುಕೊಂಡರು.ನಂತರ ದೇವಾಲಯಕ್ಕೆ ಬರುವ ಭಕ್ತರಿಗೆ ಮೂಲ ಸೌಲಭ್ಯ ಕಲ್ಪಿಸಿ ಜೊತೆಗೆ ಯಾವುದೇ ತೊಂದರೆ ಯಾಗದಂತೆ ಕ್ರಮ ಕೈಗೊಳ್ಳಿ. ಜೊತೆಗೆ ನಡೆಯುತ್ತಿರುವ ಕಾಮಗಾರಿ ಆದಷ್ಟು ಬೇಗ ಮುಗಿಸಿ ಭಕ್ತರ ಸೇವೆಗೆ ಒದಗಿಸಿ ಎಂದರು.

ಇದೇ ಸಂದರ್ಭದಲ್ಲಿ ತಾಲೂಕಿನ ಮುಖಂಡರಾದ ರಾಕೇಶ್, ವೆಂಕಟೇಶ್, ಶಶಿಕುಮಾರ್, ರಾಮಸ್ವಾಮಿ ಇನ್ನಿತರರು ಉಪಸ್ಥಿತರಿದ್ದರು.

## ಮತಗಳ್ಳತನ ಅಳಿಸಿ



ದುರ್ಬಲಗೊಳಿಸುವ ಪ್ರಯತ್ನಗಳನ್ನು ವಿರೋಧಿಸಲು ಪಕ್ಷವು ಸಾಮೂಹಿಕವಾಗಿ ಪ್ರಮಾಣವಚನ ಸ್ವೀಕರಿಸಿದೆ ಎಂದು ಅವರು ಹೇಳಿದರು. "ಸಂವಿಧಾನ ಮತ್ತು ಪ್ರಜಾಪ್ರಭುತ್ವದ ಮೇಲಿನ ನಂಬಿಕೆಯೊಂದಿಗೆ, ನಾವು ನರೇಗಾವನ್ನು ರಕ್ಷಿಸಲು, ಕಾರ್ಮಿಕರ ಹಕ್ಕುಗಳನ್ನು ರಕ್ಷಿಸಲು ಮತ್ತು ಪ್ರತಿ ಹಳ್ಳಿಯಲ್ಲಿ ನಮ್ಮ ಧ್ವನಿಯನ್ನು ಎತ್ತಲು ಪ್ರತಿಜ್ಞೆ ಮಾಡುತ್ತೇವೆ" ಎಂದು ಖರ್ಗೆ ಹೇಳಿದರು. "ಜೈ ಸಂವಿಧಾನ್" ಮತ್ತು "ಜೈ ಹಿಂದ್" ಘೋಷಣೆಗಳೊಂದಿಗೆ ಚಳುವಳಿಯನ್ನು ಮುಂದುವರಿಸಲಾಗುವುದು. ಯೋಜನೆಯಿಂದ ಮಹಾತ್ಮ ಗಾಂಧಿಯವರ ಹೆಸರನ್ನು ತೆಗೆದುಹಾಕುವುದು ಅವರ ಪರಂಪರೆಗೆ ಮಾಡಿದ ಅವಮಾನ ಎಂದು ಕಾಂಗ್ರೆಸ್ ಮತ್ತು ಇತರ ವಿರೋಧ ಪಕ್ಷಗಳು ಆರೋಪಿಸಿವೆ. ಹೊಸ ಕಾನೂನಿನಡಿಯಲ್ಲಿ, ಗ್ರಾಮೀಣ ಕುಟುಂಬಗಳಿಗೆ ಕೌಶಲ್ಯರಹಿತ ದೈಹಿಕ ದುಡಿಮೆಯನ್ನು ಕೈಗೊಳ್ಳಲು ಇಚ್ಛಿಸುವ ವಯಸ್ಕರಿಗೆ ಹಣಕಾಸು ವರ್ಷದಲ್ಲಿ 125 ದಿನಗಳ ಕೂಲಿ ಉದ್ಯೋಗವನ್ನು ಖಾತರಿಪಡಿಸಲಾಗುತ್ತದೆ.

ಭಾರತದ ಭೂಸ್ವಾಧೀನ ಕಾನೂನಿಗೆ 2015 ರ ತಿದ್ದುಪಡಿಗಳು ಸೇರಿದಂತೆ ಪರಿಣಾಮಕಾರಿಯಾಗಿ ಹಿಂದಕ್ಕೆ ಪಡೆಯಲಾದ ಪೂರ್ವನಿದರ್ಶನಗಳನ್ನು ಕಾಂಗ್ರೆಸ್ ಮುಖ್ಯಸ್ಥರು ಉಲ್ಲೇಖಿಸಿದರು. ಮೊದಲು ಸುಗ್ರೀವಾಜ್ಞೆಗಳಾಗಿ ತರಲಾಯಿತು ಮತ್ತು ನಂತರ ವಿರೋಧ ಪಕ್ಷದ ಪ್ರತಿಭಟನೆಗಳ ನಡುವೆ ಸಂಸತ್ತಿನಲ್ಲಿ ಅಂಗೀಕರಿಸಲಾಯಿತು, ಆದರೆ 2020–21 ರ ರೈತರ ಪ್ರತಿಭಟನೆಯ ನಂತರ ರದ್ದುಗೊಳಿಸಬೇಕಾಯಿತು.

"ಕೃಷಿ ಕಾನೂನುಗಳನ್ನು ಹಿಂದಕ್ಕೆ ಪಡೆಯಲಾಗುವುದು ಎಂದು ರಾಹುಲ್ ಗಾಂಧಿ ಬಹಳ ಹಿಂದೆಯೇ ಭವಿಷ್ಯ ನುಡಿದಿದ್ದರು. ಈಗ ರಾಷ್ಟ್ರವ್ಯಾಪಿ ಸಾರ್ವಜನಿಕ ಅಭಿಯಾನವನ್ನು ಪ್ರಾರಂಭಿಸುವುದು ನಮ್ಮ ಸಾಮೂಹಿಕ ಜವಾಬ್ದಾರಿಯಾಗಿದೆ." ಎಂದು ಖರ್ಗೆ ತಿಳಿಸಿದ್ದಾರೆ.

ಸಭೆಯಲ್ಲಿ, ಹಲವಾರು ರಾಜ್ಯಗಳಲ್ಲಿ ನಡೆಯುತ್ತಿರುವ ಮತದಾರರ ಪಟ್ಟಿಗಳ ವಿಶೇಷ ತೀವ್ರ ಪರಿಷ್ಕರಣೆ (ಎಸ್‌ಐಆರ್) ಬಗ್ಗೆ ಪಕ್ಷದ ಟೀಕೆಯನ್ನು ಖರ್ಗೆ ಪುನರುಚ್ಚರಿಸಿದರು. ಇದನ್ನು "ಚೆನ್ನಾಗಿ ಯೋಚಿಸಿದ ಪಿತೂರಿ" ಎಂದು ಕರೆದ ಅವರು, ಈ ಚಟುವಟಿಕೆ ಪ್ರಜಾಪ್ರಭುತ್ವ ಹಕ್ಕುಗಳನ್ನು ನಿರ್ಬಂಧಿಸುವ ಗುರಿಯನ್ನು ಹೊಂದಿದೆ ಎಂದು ಆರೋಪಿಸಿದರು.

"ಎಸ್‌ಐಆರ್ ಗಂಭೀರ ಕಳವಳದ ವಿಷಯ. ಇದು ಪ್ರಜಾಪ್ರಭುತ್ವ ಹಕ್ಕುಗಳನ್ನು ನಿರ್ಬಂಧಿಸಲು ಚೆನ್ನಾಗಿ ಯೋಚಿಸಿದ ಪಿತೂರಿಯಾಗಿದೆ" ಎಂದು ಖರ್ಗೆ ಸಿಡಬ್ಲ್ಯುಸಿ ಸಭೆಯಲ್ಲಿ ತಮ್ಮ ಆರಂಭಿಕ ಹೇಳಿಕೆಯಲ್ಲಿ ಹೇಳಿದರು ಎಂದು ಸುದ್ದಿ ಸಂಸ್ಥೆ ವರದಿ ಮಾಡಿದೆ. ರಾಹುಲ್ ಗಾಂಧಿ ದೇಶದ ಮುಂದೆ "ಮತ ಕಳ್ಳತನ"ದ ಪುರಾವೆಗಳನ್ನು ಪದೇ ಪದೇ ಪ್ರಸ್ತುತಪಡಿಸಿದ್ದಾರೆ ಎಂದು ಅವರು ಹೇಳಿದರು.

2026ರ ವಿಧಾನಸಭಾ ಚುನಾವಣೆಗೆ ಮುಂಚಿತವಾಗಿ, ನರೇಗಾ ರದ್ದತಿಗೆ ವಿರೋಧ ಮತ್ತು ಎಸ್‌ಐಆರ್ ಚಟುವಟಿಕೆಗೆ ಪ್ರತಿರೋಧ ತನ್ನ ರಾಜಕೀಯ ಕಾರ್ಯತಂತ್ರವನ್ನು ರೂಪಿಸುತ್ತದೆ ಎಂಬುದನ್ನು ಕಾಂಗ್ರೆಸ್ ಸೂಚಿಸಿದೆ. ಬಾಂಗ್ಲಾದೇಶದಲ್ಲಿ ಹಿಂದೂ ಅಲ್ಪಸಂಖ್ಯಾತರ ಮೇಲಿನ ದಾಳಿಗಳನ್ನು ಖರ್ಗೆ ಖಂಡಿಸಿದರು ಮತ್ತು ಇಡೀ ರಾಷ್ಟ್ರ ಅದರ ಬಗ್ಗೆ ಕಳವಳ ವ್ಯಕ್ತಪಡಿಸಿದೆ ಎಂದು ಹೇಳಿದರು. "ಬಿಜೆಪಿ ಮತ್ತು ಆರ್‌ಎಸ್‌ಎಸ್‌ಗೆ ಸಂಬಂಧಿಸಿದ ಸಂಘಟನೆಗಳು" ಕ್ರಿಸ್‌ಮಸ್ ದಿನದ ಆಚರಣೆಯ ಮೇಲೆ ನಡೆಸಿದ ದಾಳಿಗಳು ಕೋಮು ಸಾಮರಸ್ಯವನ್ನು ಕದಡಿವೆ ಮತ್ತು ಜಾಗತಿಕವಾಗಿ ಭಾರತದ ಪ್ರತಿಷ್ಠೆಯನ್ನು ಕಳಂಕಿತಗೊಳಿಸಿವೆ ಎಂದು ಅವರು ಹೇಳಿದರು.

ಪಕ್ಷದ ಅತ್ಯುನ್ನತ ನಿರ್ಧಾರ ತೆಗೆದುಕೊಳ್ಳುವ ಸಂಸ್ಥೆಯ ಸಭೆಯಲ್ಲಿ ಕಾಂಗ್ರೆಸ್ ಸಂಸದೀಯ ಪಕ್ಷದ ಅಧ್ಯಕ್ಷೆ ಸೋನಿಯಾ ಗಾಂಧಿ, ಲೋಕಸಭೆಯಲ್ಲಿ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ, ಶಶಿ ತರೂರ್, ಕರ್ನಾಟಕದ ಮುಖ್ಯಮಂತ್ರಿ ಸಿದ್ದರಾಮಯ್ಯ, ಹಿರಿಯ ನಾಯಕರಾದ ದಿಗ್ವಿಜಯ್ ಸಿಂಗ್, ಮಾರ್ಗರೇಟ್ ಆಳ್ವಾ, ಬಿ.ಕೆ. ಹರಿಪ್ರಸಾದ್, ಕೆ.ಸಿ. ವೇಣುಗೋಪಾಲ್ ಸೇರಿದಂತೆ ಹಿರಿಯ ನಾಯಕರು ಭಾಗವಹಿಸಿದ್ದರು. ಕರ್ನಾಟಕ, ತೆಲಂಗಾಣ ಮತ್ತು ಹಿಮಾಚಲ ಪ್ರದೇಶದಂತಹ ಕಾಂಗ್ರೆಸ್ ಆಡಳಿತವಿರುವ ರಾಜ್ಯಗಳ ಮುಖ್ಯಮಂತ್ರಿಗಳು, ಪ್ರದೇಶ ಕಾಂಗ್ರೆಸ್ ಸಮಿತಿ (ಪಿಸಿಸಿ) ಅಧ್ಯಕ್ಷರು ಸಹ ಹಾಜರಿದ್ದರು.

1ನೇ ಪುಟದಿಂದ....

## ಸಿದ್ದರಾಮಯ್ಯ ನಿರ್ಧಾರ

ಖರ್ಗೆ ಅವರೊಂದಿಗೆ ಸಮಾಲೋಚಿಸುವಂತೆ ರಾಹುಲ್ ಸಲಹೆ ನೀಡಿದ್ದರು.

ಆ ಬಳಿಕ, ರಾಜ್ಯದಲ್ಲಿ ಸರ್ಕಾರದ ನಾಯಕತ್ವಕ್ಕಾಗಿ ಗುದ್ದಾಟ, ಕೊಟ್ಟ ಮಾತು ಕುರಿತ ವಾಗ್ವಾದ ತಾರಕಕ್ಕೆ ಏರಿತ್ತು. ಸಿದ್ದರಾಮಯ್ಯ ನೇತೃತ್ವದ ಸರ್ಕಾರ ಎರಡೂವರೆ ವರ್ಷ ಪೂರ್ಣಗೊಳಿಸುತ್ತಿದ್ದಂತೆ ಅಧಿಕಾರ ಹಂಚಿಕೆಯ ಸೂತ್ರದ ವಿಚಾರ ಮುನ್ನೆಲೆಗೆ ಬಂದಿತ್ತು. ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಬಣ ಪಠಿಸುತ್ತಿದ್ದ ನಾಯಕತ್ವ ಬದಲಾವಣೆಯ ವಿಷಯಕ್ಕೆ ಪ್ರತಿಯಾಗಿ ಸಂಪುಟ ಪುನರ್‌ರಚನೆಯ ಅಸ್ತ್ರವನ್ನು ಸಿದ್ದರಾಮಯ್ಯ ಬಣ ಬಿಟ್ಟಿತ್ತು. ಪುನರ್ ರಚನೆಯ ವಿಷಯವನ್ನು ಸಿದ್ದರಾಮಯ್ಯ ಅವರೇ ದೃಢಪಡಿಸಿದ್ದರು.

ಸಂಪುಟಕ್ಕೆ ಸರ್ಜರಿಯಾದರೆ ಅಧಿಕಾರ ಹಸ್ತಾಂತರ ನನೆಗುದಿಗೆ ಬೀಳಲಿದೆ ಎಂದು ಆತಂಕಗೊಂಡ ಶಿವಕುಮಾರ್ ಬಣದ ಶಾಸಕರು ದೆಹಲಿಗೆ ದೌಡಾಯಿಸಿ ಹೈಕಮಾಂಡ್ ನಾಯಕರನ್ನು ಭೇಟಿ ಮಾಡಲು ಯತ್ನಿಸಿದ್ದರು. ಈ ಎಲ್ಲ ಬೆಳವಣಿಗೆಯಿಂದಾಗಿ ಕಾಂಗ್ರೆಸ್‌ನಲ್ಲಿ ಭಿನ್ನಮತ ತೀವ್ರಗೊಂಡಿತ್ತು. ಹೈಕಮಾಂಡ್ ನಾಯಕರ ಸೂಚನೆ ಮೇರೆಗೆ ಸಿದ್ದರಾಮಯ್ಯ?ಡಿ.ಕೆ.ಶಿವಕುಮಾರ್ ಉಪಾಹಾರ ಕೂಟ ನಡೆಸಿ ಒಗ್ಗಟ್ಟಿನ ಮಂತ್ರ ಪಠಿಸಿದ್ದರು. ಆದರೆ, ಈ ಒಗ್ಗಟ್ಟು ಕೆಲವೇ ದಿನಗಳಿಗೆ ಸೀಮಿತವಾಗಿತ್ತು. ಬೆಳಗಾವಿ ವಿಧಾನಮಂಡಲ ಅಧಿವೇಶನದ ಸಂದರ್ಭದಲ್ಲಿ ಅಂತಃಕಲಹ ಮತ್ತೆ ಬೀದಿಗೆ ಬಂದಿತ್ತು. ಇದೀಗ ಸಿದ್ದರಾಮಯ್ಯ ಅವರು ಮತ್ತೆ ಸಂಪುಟ ಪುನರ್ ರಚನೆಯ ಅಸ್ತ್ರ ಪ್ರಯೋಗಿಸಲು ಮುಂದಾಗಿದ್ದಾರೆ.

**ದಲಿತ ಸಿ.ಎಂಗಾಗಿ ಪ್ರತಿಭಟನೆ**

ಕರ್ನಾಟಕ ಮುಖ್ಯಮಂತ್ರಿಯಾಗಿ ದಲಿತರೊಬ್ಬರನ್ನು ನೇಮಿಸಬೇಕೆಂದು ಒತ್ತಾಯಿಸಿ ಕಾಂಗ್ರೆಸ್ ಪ್ರಧಾನ ಕಚೇರಿಯ ಮುಂದೆ ಸುಮಾರು ಒಂದು ಡಜನ್ ಜನರು ಶನಿವಾರ ಪ್ರತಿಭಟನೆ ನಡೆಸಿದರು. ಇಂದಿರಾ ಭವನದಲ್ಲಿ ಕಾಂಗ್ರೆಸ್ ಕಾರ್ಯಕಾರಿ ಸಮಿತಿ ಸಭೆ ನಡೆಯುತ್ತಿದ್ದಾಗ ಬಾಬಾ ಸಾಹೇಬ್ ಅಂಬೇಡ್ಕರ್ ದಲಿತ ಸೇವಾ ಸಮಿತಿಯಿಂದ ಪ್ರತಿಭಟನೆ ನಡೆಯಿತು. ಕರ್ನಾಟಕ ಮುಖ್ಯಮಂತ್ರಿ ಸಿದ್ದರಾಮಯ್ಯ ಸಿಡಬ್ಲ್ಯುಸಿ ಸಭೆಯಲ್ಲಿ ಹಾಜರಿದ್ದರು.

ಪ್ರತಿಭಟನಾಕಾರರು ಹಿಡಿದಿದ್ದ ಬ್ಯಾನರ್‌ನಲ್ಲಿ ಗೃಹ ಸಚಿವ ಜಿ. ಪರಮೇಶ್ವರ ಅವರ ಚಿತ್ರ ಹಾಗೂ ತೋಲ್ ತಿರುಮಾವಲವನ್ ಅವರ ಚಿತ್ರವಿತ್ತು. ಸುಮಾರು ಅರ್ಧ ಗಂಟೆ ಪ್ರತಿಭಟನೆ ನಡೆಸಿದ ಅವರು ಬಳಿಕ ಹೈಕಮಾಂಡ್‌ಗೆ ಮನವಿ ಸಲ್ಲಿಸಿದರು.

ಡಿ.ಕೆ. ಶಿವಕುಮಾರ್ ಅವರ ಬಣ ನಾಯಕತ್ವ ಬದಲಾವಣೆಗೆ ಪಟ್ಟು ಹಿಡಿದಿರುವ ಸಮಯದಲ್ಲೇ ಈ ಪ್ರತಿಭಟನೆ ನಡೆದಿದೆ. 2023ರಲ್ಲಿ ಕಾಂಗ್ರೆಸ್ ಪಕ್ಷವು ಪ್ರಚಂಡ ಬಹುಮತ ಗಳಿಸಲು ದಲಿತರು ಪ್ರಮುಖ ಕಾರಣ. ಪಕ್ಷದಲ್ಲಿ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಸಚಿವರಾದ ಕೆ.ಎಚ್.ಮುನಿಯಪ್ಪ ಜಿ.ಪರಮೇಶ್ವರ ಎಚ್.ಸಿ.ಮಹದೇವಪ್ಪ ಸತೀಶ ಜಾರಕಿಹೊಳಿ ಪೈಕಿ ಒಬ್ಬರನ್ನು ಮುಖ್ಯಮಂತ್ರಿ ಸ್ಥಾನಕ್ಕೆ ಪರಿಗಣಿಸಬೇಕು. ಈ ಮೂಲಕ ಸಾಮಾಜಿಕ ನ್ಯಾಯ ಒದಗಿಸಬೇಕು ಎಂದು ಮನವಿಯಲ್ಲಿ ಒತ್ತಾಯಿಸಲಾಗಿದೆ.

## ಸರಿಗಟ್ಟಿದ ಸಿದ್ದರಾಮಯ್ಯ

ಶುಕ್ರವಾರ ಬಿಡುಗಡೆ ಮಾಡಿದರು. ಅಹಿಂದ ಯುವ ಸಮುದಾಯದ ಮುಖಂಡರು ಈ ವೇಳೆ ಹಾಜರಿದ್ದರು. ಉದ್ದೇಶಿತ ಔತಣಕೂಟದಲ್ಲಿ 10 ಸಾವಿರ ಜನರು ಪಾಲ್ಗೊಳ್ಳುವ ನಿರೀಕ್ಷೆ ಇದೆ ಎಂದು ಮುಖಂಡರು ತಿಳಿಸಿದ್ದಾರೆ.

ಸಿದ್ದರಾಮಯ್ಯ ಅವರನ್ನು ವಿರೋಧಿಸುವುದಕ್ಕಾಗಿ ಅಹಿಂದ, ಹಿಂದುಳಿದ ವರ್ಗಗಳ ಆಹಾರ ಪದ್ಧತಿಯ ಮೇಲೆ ದಾಳಿ ನಡೆಸಲಾಗುತ್ತದೆ. ನಮ್ಮ ಆಹಾರ ಪದ್ಧತಿಯ ವಿರುದ್ಧವಾಗಿ ನಡೆಸುತ್ತಿರುವ ಹೋರಾಟದ ವಿರುದ್ಧವಾಗಿ ನಾವು ಸಾರ್ವಜನಿಕವಾಗಿ 'ನಾಟಿ ಕೋಳಿ ಔತಣಕೂಟ'ವನ್ನು ಮಾಡುತ್ತಿದ್ದೇವೆ.

ಸಿದ್ದರಾಮಯ್ಯ ದೀರ್ಘಾವಧಿ ಮುಖ್ಯಮಂತ್ರಿಯಾಗಿರುವ ಹಿನ್ನೆಲೆಯಲ್ಲಿ ಸಂಭ್ರಮಾಚರಣೆಗಾಗಿ ಈ ಸಮ್ಮೇಳನವನ್ನು ಮಾಡುತ್ತಿದ್ದೇವೆ ಎಂದು ಹೇಳಿದ್ದಾರೆ.

**ಏನಿದು ಅರಸು ದಾಖಲೆ:**

ದೇವರಾಜ ಅರಸು ಅವರು 1972ರಿಂದ 1977ರವರೆಗೆ ಮುಖ್ಯಮಂತ್ರಿಯಾಗಿದ್ದು ನಿರಂತರ 5 ವರ್ಷ ಕಾಲ ಆಡಳಿತ ನಡೆಸಿದ ರಾಜ್ಯದ ಮೊದಲ ಮುಖ್ಯಮಂತ್ರಿ ಎಂಬ ಖ್ಯಾತಿಗೆ ಪಾತ್ರರಾಗಿದ್ದರು. ನಂತರ 2ನೇ ಅವಧಿಯಲ್ಲಿ 1 ವರ್ಷ 318 ದಿನ ಆಡಳಿತ ನಡೆಸಿದ್ದರು.

ಒಟ್ಟು 7 ವರ್ಷ 239 ದಿನ ಮುಖ್ಯಮಂತ್ರಿಯಾಗಿ ಕಾರ್ಯನಿರ್ವಹಿಸಿದ್ದರು. ಇಷ್ಟು ವರ್ಷಗಳ ಕಾಲ ರಾಜ್ಯದಲ್ಲಿ ಯಾರೊಬ್ಬರೂ ಮುಖ್ಯಮಂತ್ರಿಯಾಗಿ ಆಡಳಿತ ನಡೆಸಿರಲಿಲ್ಲ. ಈಗ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಅರಸು ದಾಖಲೆಯನ್ನು ಮೀರಿಸಿದ್ದು ರಾಜ್ಯದ ದೀರ್ಘಾವಧಿ ಮುಖ್ಯಮಂತ್ರಿ ಎಂದು ದಾಖಲೆಗೆ ಪಾತ್ರರಾಗುತ್ತಿದ್ದಾರೆ. ಹಿಂದೆ ಸಿದ್ದರಾಮಯ್ಯ ಅವರು 5 ವರ್ಷಗಳ ಕಾಲ ನಿರಂತರ ಆಡಳಿತ ನಡೆಸಿದ ರಾಜ್ಯದ 2ನೇ ಮುಖ್ಯಮಂತ್ರಿ ಎಂಬ ದಾಖಲೆಗೂ ಪಾತ್ರರಾಗಿದ್ದರು.

## ಪ್ರವಾಸಿಗರ ಲಗ್ಗೆ

: ಜಲಪಾತ ವೀಕ್ಷಿಸಲು ಬಂದಂತ ಪ್ರವಾಸಿಗರು ತೆಪ್ಪದಲ್ಲಿ ತೆರಳುವ ವೇಳೆಯಲ್ಲಿ ಮೊಬೈಲ್ ನಲ್ಲಿ ವಿಹಾರವನ್ನು ಸೆರೆಹಿಡಿದು ಸಾಮಾಜಿಕ ಜಾಲತಾಣದಲ್ಲಿ ಅರಿಬಿಟ್ಟಿರುವ ಚಿತ್ರ ತೆಪ್ಪಗಳು ಮಣಿ ಜೋಡಣೆಯಂತೆ ಒಂದರ ಹಿಂದೆ ಸಾಲಾಗಿ ಜಲಪಾತ ವೀಕ್ಷಿಸುತ್ತಿರುವ ದೃಶ್ಯ ನೋಡುಗರ ಕಣ್ಮನ ಸೆಳೆಯುತ್ತಿದೆ.

ಬಳಿಕ ಅಲ್ಲಿ ಮಸಾಜ್ ಮಾಡಿಸಿಕೊಳ್ಳಲು ಸಹ ಪ್ರವಾಸಿಗರು ಮುಗಿಬಿದ್ದು ವರ್ಷಾಂತ್ಯದಿಂದ ಜಂಜಾಟದಲ್ಲಿದ್ದ ಪ್ರವಾಸಿಗರಿಗೆ ಉತ್ತಮ ವಾತಾವರಣ ಕಂಡು ಬಂತು.

### ಓದುಗರ ಒಡಲಾಳ

**ನೀವೂ ಪತ್ರ ಬರೆಯಬಹುದು**

ನಿಮ್ಮ ನಗರ, ನಿಮ್ಮ ಗ್ರಾಮ ಹಾಗೂ ನಿಮ್ಮ ಸುತ್ತ ಮುತ್ತ ಇರುವ ಸಮಸ್ಯೆಗಳ ಬಗ್ಗೆ ನೀವು ಪತ್ರ ಬರೆಯಬಹುದು. ಅದರ ಪರಿಹಾರಕ್ಕೆ ನಿಮ್ಮ ಧ್ವನಿಯಾಗಿ ನಾವು ಪತ್ರ ಪ್ರಕಟಿಸಿ ಸಂಬಂಧಿಸಿದವರ ಗಮನ ಸೆಳೆಯಲಾಗುವುದು.

ನಿಮ್ಮ ಪತ್ರಗಳನ್ನು ಇಮೇಲ್ vijayakaalamysuru@gmail.com ಅಥವಾ ವಾಟ್ಸಾಪ್ ಸಂಖ್ಯೆ 8123436767 ಕಳುಹಿಸುವುದು.

ಸಮಸ್ಯೆಗೆ ಪೂರಕ ಫೋಟೋಗಳು ಜತೆಗೆ ನಿಮ್ಮ ಭಾವಚಿತ್ರ ಇದ್ದರೆ ಉತ್ತಮ.

ಸಂಕ್ಷಿಪ್ತ ಸುದ್ದಿ

## ವಸತಿ ಶಾಲೆ ಬಳಿ ಭಾರೀ ಗಾತ್ರದ ಹೆಬ್ಬಾವು ರಕ್ಷಣೆ



ಹೆಚ್.ಡಿ.ಕೋಟೆ:- ಅರಣ್ಯಕ್ಕೆ ಹೊಂದಿಕೊಂಡಂತಿರುವ ಪ್ರದೇಶದಲ್ಲಿ ನಿರ್ಮಿಸಲಾಗಿರುವ ಏಕಲವ್ಯ ಮಾದರಿ ವಸತಿ ಶಾಲೆ ಬಳಿ ಭಾರೀ ಗಾತ್ರದ ಹೆಬ್ಬಾವನ್ನು ಅರಣ್ಯ ಇಲಾಖೆ ಸಿಬ್ಬಂದಿಗಳು ಹಿಡಿದು ಸಂರಕ್ಷಿಸಿ ಸುರಕ್ಷಿತ ಸ್ಥಳಕ್ಕೆ ರವಾನಿಸಿದ ಘಟನೆ ಮೇಟಿಕುಪ್ಪೆ ಅರಣ್ಯ ವಲಯದಲ್ಲಿ ಜರುಗಿದೆ.

ಹಲವಾರು ವರ್ಷಗಳ ಹಿಂದೆ ಕೇಂದ್ರ ಸರ್ಕಾರದ ಯೋಜನೆಯಂತೆ ಗಿರಿಜನರಿಗೆ ಪುನರ್ವಸತಿ ಯೋಜನೆ ಯಡಿ ಸೊಳ್ಳೆಪುರ ಅರಣ್ಯ ಪ್ರದೇಶದಲ್ಲಿ ಗಿರಿ ಜನರಿಗಾಗಿ ನೂರಾರು ಎಕರೆ ಅರಣ್ಯ ಪ್ರದೇಶವನ್ನು ನೀಡಲಾಗಿತ್ತು ಅಂತೆ ಯೇ ಕೇಂದ್ರ ಸರ್ಕಾರದ ಯೋಜನೆಯಲ್ಲಿ ಅಲ್ಲೊಂದು ಏಕಲವ್ಯ ಶಾಲೆ ಹಾಗೂ ವಸತಿಯನ್ನು ನಿರ್ಮಾಣ ಮಾಡಲಾಗಿತ್ತು, ಅರಣ್ಯ ಪ್ರದೇಶದ ವಿಸ್ತೀರ್ಣದಲ್ಲಿಯೇ ಇರುವ ಈ ಏಕಲವ್ಯ ವಸತಿ ಶಾಲೆಯ ಬಳಿ ಅರಣ್ಯದ ಸರೀಸೃಪಗಳು ಹುಲಿ ಚಿರತೆ ಕ್ರೂರ ಮೃಗಗಳು ಸರ್ವೇಸಾಮಾನ್ಯ, ಅಪರೂಪಕ್ಕೆ ಅತಿಥಿ ಎಂಬಂತೆ ಶಾಲೆಯ ಮುಂಭಾಗದ ಆವರಣದಲ್ಲಿ ಅತಿ ಉದ್ದನೆಯ ಭಾರಿ ಗಾತ್ರದ ಹೆಬ್ಬಾ ವೊಂದು ಈ ಪ್ರದೇಶದ ಸುತ್ತಮುತ್ತಲ ಜನತೆಗೆ ಗೋಚರಿಸಿದ್ದು, ಈ ಸಂಬಂಧ ಮೇಟಿಕುಪ್ಪೆ ಅರಣ್ಯವಲಯದ ಅರಣ್ಯಾಧಿಕಾರಿ ರಶ್ಮಿರವರಿಗೆ ತಿಳಿಸಿದ ಮೇರೆಗೆ ತಮ್ಮ ಸಿಬ್ಬಂದಿಗಳೊಡಗೂಡಿ ಗ್ರಾಮಸ್ಥರ ನೆರವಿನೊಂದಿಗೆ ಸುರಕ್ಷಿತವಾಗಿ ಹಿಡಿದು ಮತ್ತೊಂದು ದೂರದ ಅರಣ್ಯ ಪ್ರದೇಶಕ್ಕೆ ಬಿಟ್ಟಿರುವುದಾಗಿ ಮೇಟಿಕುಪ್ಪೆ ಅರಣ್ಯ ವಲಯ ಅಧಿಕಾರಿ ರಶ್ಮಿ ರವರು ತಿಳಿಸಿದ್ದಾರೆ.

ಹೆಬ್ಬಾವಿನ ಸಂರಕ್ಷಣಾ ಕಾರ್ಯಾಚರಣೆಯಲ್ಲಿ ಮೇಟಿಕುಪ್ಪೆ ಅರಣ್ಯಗಸ್ತು ಆನೆಪಾಲಕ ಸುದರ್ಶನ್, ಹಾಗೂ ಸಿಬ್ಬಂದಿಗಳಾದ ಸುದರ್ಶನ್, ವೆಂಕಟೇಶ್, ಅಭಿ, ಪೂರ್ಣಚಂದ್ರ, ಹಾಗೂ ಗ್ರಾಮಸ್ಥರು ಪಾಲ್ಗೊಂಡಿದ್ದರು.

## ಸ್ಥಳೀಯ ಸಂಸ್ಥೆಗಳ ಚುನಾವಣೆಗೆ ವೇಳಾಪಟ್ಟಿ ಪ್ರಕಟ

ರಾಮನಗರ:- ಬೆಂಗಳೂರು ದಕ್ಷಿಣ ಜಿಲ್ಲಾ ಯೋಜನಾ ಸಮಿತಿಯನ್ನು ರಚಿಸಲು ನಗರ ಸ್ಥಳೀಯ ಸಂಸ್ಥೆಗಳಿಂದ ಚುನಾವಣೆ ಮುಖಾಂತರ ಸದಸ್ಯರನ್ನು ಆಯ್ಕೆ ಮಾಡಬೇಕಾಗಿದ್ದು, ಈ ಸಂಬಂಧ ಅಧಿಸೂಚನೆ ಹೊರಡಿಸಲಾಗಿದೆ. ಪ್ರಸ್ತುತ ಸಾಲಿನಲ್ಲಿ ಜಿಲ್ಲಾ ಯೋಜನಾ ಸಮಿತಿಗೆ ಸದಸ್ಯರ ಆಯ್ಕೆ ಚುನಾವಣೆ ನಡೆಸಲು ವೇಳಾಪಟ್ಟಿ ನಿಗದಿ ಪಡಿಸಲಾಗಿದೆ.

ವಿವರ: 8 ಜನ ನಗರ ಸ್ಥಳೀಯ ಸಂಸ್ಥೆಗಳ ಸದಸ್ಯರನ್ನು ಚುನಾಯಿಸಬೇಕು. ನಗರ ಸ್ಥಳೀಯ ಕ್ಷೇತ್ರದಲ್ಲಿ 85 ಮತದಾರರಿದ್ದಾರೆ. ಡಿ.30ರಂದು ಚುನಾವಣಾ ಅಧಿಸೂಚನೆ ಹೊರಡಿಸಲಾಗುವುದು. ಡಿ.31ರಂದು ಬೆಳಿಗ್ಗೆ 11 ರಿಂದ ಸಂಜೆ 5 ಗಂಟೆಯವರೆಗೆ ನಾಮಪತ್ರ ಸಲ್ಲಿಸಲು ದಿನಾಂಕ ನಿಗದಿ ಪಡಿಸಲಾಗಿದೆ. 2026ರ ಜನವರಿ 9ರಂದು ಸಂಜೆ 5 ಗಂಟೆಯವರೆಗೆ ನಾಮಪತ್ರ ಸಲ್ಲಿಸಲು ಕೊನೆಯ ದಿನವಾಗಿದೆ. ಜನವರಿ 12ರ ಬೆಳಿಗ್ಗೆ 11 ಗಂಟೆಯವರೆಗೆ ನಾಮಪತ್ರಗಳ ಪರಿಶೀಲನೆ ನಡೆಯಲಿದೆ. ಜನವರಿ 15ರಂದು ಬೆಳಿಗ್ಗೆ 11 ಗಂಟೆಯಿಂದ ಸಂಜೆ 5 ಗಂಟೆಯವರೆಗೆ ನಾಮಪತ್ರಗಳನ್ನು ಹಿಂದಕ್ಕೆ ಪಡೆಯಲು ಅಂತಿಮ ದಿನವಾಗಿದೆ. ಚುನಾವಣೆ ಅವಶ್ಯವಿದ್ದಲ್ಲಿ ಜನವರಿ 17ರಂದು ಬೆಳಿಗ್ಗೆ 11 ಗಂಟೆಯಿಂದ ಸಂಜೆ 5 ಗಂಟೆಯವರೆಗೆ ಬೆಂಗಳೂರು ದಕ್ಷಿಣ (ರಾಮನಗರ) ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಚುನಾವಣೆ ನಡೆಸಲಾಗುವುದು.

ಮರು ಮತದಾನ ಇದ್ದಲ್ಲಿ ಜನವರಿ 19ರಂದು ಬೆಳಿಗ್ಗೆ 11 ಗಂಟೆಯಿಂದ ಸಂಜೆ 5 ಗಂಟೆಯವರಗೆ ಬೆಂಗಳೂರು ದಕ್ಷಿಣ (ರಾಮನಗರ) ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಮತದಾನ ನಡೆಸಲಾಗುವುದು. ಜನವರಿ 20ರಂದು ಬೆಳಿಗ್ಗೆ 11 ಗಂಟೆಯಿಂದ ಮಧ್ಯಾಹ್ನ 4 ಗಂಟೆಯವರಗೆ ಬೆಂಗಳೂರು ದಕ್ಷಿಣ (ರಾಮನಗರ) ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಮತಗಳ ಎಣಿಕೆ ಹಾಗೂ ಫಲಿತಾಂಶ ಘೋಷಿಸಲಾಗುವುದು ಮತ್ತು ಚುನಾವಣೆ ಪ್ರಕ್ರಿಯೆ ಪೂರ್ಣಗೊಳ್ಳುತ್ತದೆ ಎಂದು ಬೆಂಗಳೂರು ದಕ್ಷಿಣ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ನಾಳೆ ವಿಶ್ವಮಾನವ ದಿನಾಚರಣೆ

ರಾಮನಗರ:- ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ಡಿ.29ರಂದು ಬೆಳಿಗ್ಗೆ 10.30ಕ್ಕೆ ನಗರದ ಕಂದಾಯಭವನದ ಮೂರನೇ ಮಹಡಿಯಲ್ಲಿರುವ ಕೊಠಡಿ ಸಂಖ್ಯೆ: 409ರಲ್ಲಿ ವಿಶ್ವಮಾನವ ದಿನಾಚರಣೆಯನ್ನು ಆಯೋಜಿಸಲಾಗಿದೆ.

ವಿಶ್ವಮಾನವ ದಿನಾಚರಣೆ ಕಾರ್ಯಕ್ರಮಕ್ಕೆ ಜಿಲ್ಲೆಯ ಎಲ್ಲಾ ಸಮುದಾಯದ ಅಧ್ಯಕ್ಷರು, ಕಾರ್ಯದರ್ಶಿಗಳು, ಮುಖಂಡರು, ಎಲ್ಲಾ ಸಂಘ-ಸಂಸ್ಥೆಗಳ ಪದಾಧಿಕಾರಿಗಳು, ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದ ಎಲ್ಲಾ ಅಧಿಕಾರಿಗಳು, ಸಿಬ್ಬಂದಿಗಳು ಕಡ್ಡಾಯವಾಗಿ ಭಾಗವಹಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸುವಂತೆ ಬೆಂಗಳೂರು ದಕ್ಷಿಣ ಜಿಲ್ಲೆಯ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಇಂದಿನ ಶಿಕ್ಷಣದಲ್ಲಿ ಸಂತೋಷವಿಲ್ಲ, ಶಿಕ್ಷೆ ಇದೆ

### ಮೈಸೂರು ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಡಾ.ಬಿ.ಜೆ.ವಿಜಯಕುಮಾರ್ ಕಳವಳ



ಪಿರಿಯಾಪಟ್ಟಣ: ಪ್ರಸ್ತುತ ಶಿಕ್ಷಣ ವ್ಯವಸ್ಥೆಯು ವಿದ್ಯಾರ್ಥಿಗಳಲ್ಲಿ ಸೃಜನಶೀಲ ಮನೋಭಾವವನ್ನು ಉದ್ದೀಪಿಸಿ ಅವರನ್ನು ಸ್ವಾವಲಂಬಿಗಳನ್ನಾಗಿಸಿ, ಉತ್ತಮ ನಾಗರಿಕರಾಗಿ ಬದುಕಲು ಅಣಿ ಗೊಳಿಸಲು ಲೋಹಿಯಾ ಹಾಗೂ ಮಹಾತ್ಮ ಗಾಂಧಿಯವರ ತಳಹದಿಯ ಶಿಕ್ಷಣ ಅತ್ಯಗತ್ಯ ಎಂದು ಮೈಸೂರು ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಡಾ.ಬಿ.ಜೆ.ವಿಜಯಕುಮಾರ್ ತಿಳಿಸಿದರು.

ತಾಲ್ಲೂಕಿನ ಗಿರಗೂರು ಗ್ರಾಮದ ಮಿಳಿಂದ ಶಾಲೆಯಲ್ಲಿ ಹಮ್ಮಿಕೊಂಡಿದ್ದ ಮಿಳಿಂದ ಶಾಲಾ ವಾರ್ಷಿಕೋತ್ಸವ ಹಾಗೂ ಮಿಳಿಂದ ಸಾಂಸ್ಕೃತಿಕ ಸೌರಭ ಕಾರ್ಯಕ್ರಮದಲ್ಲಿ ಮಾತನಾಡಿದರು.

ಪ್ರಸ್ತುತ ದಿನಗಳಲ್ಲಿ ಶಿಕ್ಷಣವು ವಿದ್ಯಾರ್ಥಿಗಳ ಪಾಲಿಗೆ ಸಂತಸದಾಯಕ ವಾದ ಅರ್ಥಪೂರ್ಣ ಕಲಿಕೆಯಾಗುವ ಬದಲು ಕಂಠಪಾಠ ಒಪ್ಪಿಸುವ ಶಿಕ್ಷೆಯಾಗಿದೆ ಎಂಬುದು ಸಂಶೋಧನೆಗಳಿಂದ ದೃಢಪಡಿಸಿವೆ. ಆದ್ದರಿಂದ ಮಕ್ಕಳ ಭವಿಷ್ಯ ಉಜ್ವಲವಾಗಬೇಕಾದರೆ ಸಮಾಜವಾದಿ ಚಿಂತಕ ರಾಮಮನೋಹರ ಲೋಹಿಯಾ ಹಾಗೂ ರಾಷ್ಟ್ರಪಿತ ಮಹಾತ್ಮ ಗಾಂಧಿಯವರ ಚಿಂತನೆಗಳನ್ನು ಒಳಗೊಂಡ ಶಿಕ್ಷಣವನ್ನು ನೀಡಬೇಕು. ಮಿಳಿಂದ ವಿದ್ಯಾ ಸಂಸ್ಥೆ ಸಮಾಜವಾದಿ ಲೋಹಿಯಾ ಹಾಗೂ ಗಾಂಧಿವಾದ ಸಿದ್ದಾಂತದ ತಳಹದಿಯ ಮೇಲೆ ನಡೆಯುತ್ತಿದೆ.

ಈ ಸಂಸ್ಥೆಯ ಮೇಲೆ ಅನೇಕರು ಕೆಂಗಣ್ಣು ಬೀರಿದ್ದರೂ ಪ್ರೊ.ಗೋವಿಂಯ್ಯನವರು ಅನೇಕ ಅಡೆತಡೆಗಳನ್ನು ದಾಟಿ ಈ ಸಂಸ್ಥೆಯನ್ನು ಮುನ್ನಡೆಸುತ್ತಿದ್ದಾರೆ. ಕೊಲ್ಲುವವರಿದ್ದ ಮೇಲೆ ಕಾಯುವವರು ಇದ್ದೇ ಇರುತ್ತಾರೆ. ಮುಂದಿನ ದಿನಗಳಲ್ಲಿ ಸಮಾಜವಾದಿ ಚಿಂತನೆಯುಳ್ಳ ಎಲ್ಲರೂ ನಿಮ್ಮ ಬೆಂಬಲಕ್ಕೆ ನಿಲ್ಲುತ್ತವೆ ಎಂದರು.

ಮೈಸೂರು ವಿಶ್ವವಿದ್ಯಾಲಯ ಸಮಾಜ ಕಾರ್ಯ ವಿಭಾಗದ ವಿಶ್ರಾಂತ ಮುಖ್ಯಸ್ಥ ಪ್ರೊ.ಸಿದ್ದೇಗೌಡ ಮಾತನಾಡಿ ವಿದ್ಯಾರ್ಥಿಗಳು ಜೀವನದಲ್ಲಿ ಸಾಧನೆ ಮಾಡಲು ವಿಶೇಷವಾದ ಪ್ರತಿಭೆಯನ್ನು ಬೆಳೆಸಿಕೊಳ್ಳಬೇಕು. ಆಗ ಮಾತ್ರ ವಿದ್ಯಾರ್ಥಿಯ ವ್ಯಕ್ತಿತ್ವ ರೂಪಿತವಾಗಲಿದೆ.

ವಿದ್ಯೆ ಮತ್ತು ಸಂಸ್ಕಾರ ಬದುಕಿನ ಎರಡು ಕಣ್ಣುಗಳು, ವ್ಯಕ್ತಿತ್ವ ನಿರ್ಮಾಣದಲ್ಲಿ ನಮಗೆ ನಾವೇ ರೂವಾರಿಗಳಾಗಬೇಕು. ವಿದ್ಯಾರ್ಥಿಗಳಲ್ಲಿ ಜ್ಞಾನದ ಹಸಿವಿರಬೇಕು. ಇಂದಿನ ವಿದ್ಯಾರ್ಥಿ ಸಮುದಾಯಕ್ಕೆ ಶಾಂತಿ, ಸಹನೆ ತಾಳ್ಮೆ ಅತ್ಯಂತ ಅವಶ್ಯಕವಾದ ಮಾನದಂಡಗಳಾಗಿದ್ದು, ವಿದ್ಯಾರ್ಥಿಗಳು ಹಿರಿಯರನ್ನು ಗುರಗಳನ್ನು ಗೌರವಿಸುವುದರ ಜತೆಗೆ ವಿದ್ಯಾರ್ಥಿಗಳು ಕೀಳರಿಮೆಯಿಂದ ಹೊರಬಂದಾಗ ಮಾತ್ರ ಸನ್ಮಾನಗಳಿಗೆ ಪಾತ್ರರಾಗಲು ಸಾಧ್ಯ ಹಾಗೆಯೇ ಪೋಷಕರು ಮಕ್ಕಳ ಪ್ರೇರಣಾ ಶಕ್ತಿಯಾಗಿ ಕೆಲಸ ಮಾಡಬೇಕು ಎಂದರು.

ಆದಿವಾಸಿ ಬುಡಕಟ್ಟು ಕೃಷಿಕ ಸಮಾಜದ ಅಧ್ಯಕ್ಷ ಜಯಪ್ಪ ಮಾತನಾಡಿ ಹಿಂದುಳಿದ ಮತ್ತು ಬುಡಕಟ್ಟು ಸಮುದಾಯದ ಮಕ್ಕಳು ಶಾಲೆಯಿಂದ ಹೊರಗುಳಿಯದಂತೆ ಪೋಷಕರು ಎಚ್ಚರಿಕೆ ವಹಿಸಬೇಕು ಆಗ ಮಾತ್ರ ಬುಡಕಟ್ಟು ಸಮುದಾಯ ಮುಖ್ಯವಾಹಿನಿಗೆ ಬರಲು ಸಾಧ್ಯ ಎಂದರು. ಕಾರ್ಯಕ್ರಮದಲ್ಲಿ ವಿವಿಧ ಕ್ಷೇತ್ರಗಳಲ್ಲಿ ಸಾಧನೆಗೈದ ಮಹನೀಯರನ್ನು ಸನ್ಮಾನಿಸಲಾಯಿತು.

ಕಾರ್ಯಕ್ರಮದಲ್ಲಿ ಸಂಸ್ಥೆಯ ಮುಖ್ಯಸ್ಥ ಪ್ರೊ.ಗೋವಿಂದಯ್ಯ, ಆದಿವಾಸಿ ಬುಡಕಟ್ಟು ಸಮುದಾಯದ ಹೋರಾಟಗಾರ ಎಸ್.ಶ್ರೀ ಕಾಂತ್, ಗ್ರಾಪಂ ಅಧ್ಯಕ್ಷೆ ಗೀತಾ ಗುರುಬಸಪ್ಪ, ಗ್ರಾಪಂ ಸದಸ್ಯ ಸಲೀಂ, ನಿವೃತ್ತ ಶಿಕ್ಷಕಿ ಆಶಾ, ಬಿಬೇಟಿಯನ್ ಸಮುದಾಯದ ಹೋರಾಟ ಗಾರ್ತಿ ತೇಂಜೀನ್ ಸೊಯಾಂಗ್, ಶಾಲಾ ಮುಖ್ಯೋಪಾಧ್ಯಾಯರಾದ ಝಾನ್ಸಿ , ಗೀತಾ ಎಂ.ಆರ್., ಶಿಕ್ಷಕ ಸುರೇಶ್ ಕುಮಾರ್, ನಿಂಗ ರಾಜು ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

## ಬಿಡದಿ ರೈಲು ನಿಲ್ದಾಣ ಶೀಘ್ರ ಮೇಲ್ದರ್ಜೆಗೆ: ಸೋಮಣ್ಣ



ರಾಮನಗರ:- ಅಭಿವೃದ್ಧಿ ಹೊಂದಿರುವ ಬೆಂಗಳೂರಿನ ಒತ್ತಡ ಕಡಿಮೆ ಮಾಡಲು ಬಿಡದಿ-ರಾಮನಗರ ರೈಲು ನಿಲ್ದಾಣಗಳನ್ನು ಮೇಲ್ದರ್ಜೆಗೇರಿಸಲು ಯೋಜನೆ ರೂಪಿಸಿ ಅನುಷ್ಠಾನಗೊಳಿಸಲಾಗುತ್ತಿದೆ ಎಂದು ಕೇಂದ್ರದ ರೈಲ್ವೇ ಮತ್ತು ಜಲಶಕ್ತಿ ಖಾತೆಯ ರಾಜ್ಯ ಸಚಿವರಾದ ವಿ. ಸೋಮಣ್ಣ ಅವರು ತಿಳಿಸಿದರು.

ಅವರು ಬಿಡದಿಯ ರೈಲು ನಿಲ್ದಾಣದ ಪರಿವೀಕ್ಷಣೆ ನಡೆಸಿದ ನಂತರ ಮಾತನಾಡಿದರು. 2026ರ ಮಾರ್ಚ್ ಅಂತ್ಯದೊಳಗೆ ಬಿಡದಿ ರೈಲು ನಿಲ್ದಾಣವನ್ನು ಆಧುನೀಕರಣಗೊಳಿಸಲು ಒತ್ತು ನೀಡಲಾಗಿದೆ, ರಾಮನಗರ ಹಾಗೂ ಬಿಡದಿ ಒಂದೇ ನಾಣ್ಯದ ಎರಡು ಮುಖಗಳಿದ್ದಂತೆ, ಈ ಎರಡು ಪ್ರದೇಶಗಳ ಅಭಿವೃದ್ಧಿಗೊಳಿಸಲು ಆದ್ಯತೆ ನೀಡಲಾಗಿದೆ, ರಾಮನಗರ ಹೇಗೆ ಅಭಿವೃದ್ಧಿ ಹೊಂದುತ್ತಿದೆಯೋ ಅದೇ ರೀತಿ ಬಿಡದಿಯನ್ನು ಸಹ ಅಭಿವೃದ್ಧಿಗೊಳಿಸಬೇಕೆಂಬ ಆಶಯ ನಮ್ಮದು, ಅದಕ್ಕಾಗಿ ಅಧಿಕಾರಿಗಳೊಂದಿಗೆ ಅಭಿವೃದ್ದಿಗಾಗಿ ಯೋಜನೆಗಳನ್ನು ರೂಪಿಸಲಾಗಿದೆ, ಬಿಡದಿ ರೈಲು ನಿಲ್ದಾಣದಲ್ಲಿ ಮೂಲ ಸೌಕರ್ಯ ಒದಗಿಸಿದರೆ ಬೆಂಗಳೂರಿನ ಒತ್ತಡ ಕಡಿಮೆಯಾಗುತ್ತದೆ ಎಂದರು.

ಬೆಂಗಳೂರಿನಲ್ಲಿ ರೈಲುಗಳನ್ನು ನಿಲ್ಲಿಸಲು ಸ್ಥಳವಿಲ್ಲ. 24 ಗಂಟೆಗಳ ಕಾಲ ಒಂದು ರೈಲು ಪ್ರಯಾಣಿಸಿದರೆ ಅದನ್ನು ಸ್ವಚ್ಛಗೊಳಿಸಲು, ತಾಂತ್ರಿಕ ದೋಷಗಳನ್ನು ಪರಿಶೀಲಿಸುವ ವ್ಯವಸ್ಥೆಯನ್ನು ರೈಲು ಇಲಾಖೆ ಸುಮಾರು ವರ್ಷಗಳಿಂದ ಮಾಡುತ್ತಿರುವುದರಿಂದ ಈ ಭಾಗಗಳಲ್ಲಿ ಕಹಿ ಘಟನೆಗಳಾಗುತ್ತಿಲ್ಲ. ಅದಕ್ಕಾಗಿ ಜಾಗಗಳನ್ನು ಗುರುತಿಸಲಾಗುತ್ತಿದೆ ಎಂದು ಹೇಳಿದರು.

ಬೆಂಗಳೂರು ಸುತ್ತಮುತ್ತ 101 ಎಲ್‌ಸಿ ಗೇಟ್‌ಗಳ ಮೇಲ್ಸೇತುವೆಗಳನ್ನು ನಿರ್ಮಿಸಲು ಸ್ಥಳ ಗುರುತಿಸಿ, ಏಕಕಾಲದಲ್ಲೆ ನಿರ್ಮಿಸುವಂತೆ ಕೇಂದ್ರ ಸರ್ಕಾರದ ಸೂಚನೆಯಾಗಿದೆ. ಇದಕ್ಕಾಗಿ ರಾಜ್ಯ ಸರ್ಕಾರದ ಸಚಿವರು, ಶಾಸಕರು, ಅಧಿಕಾರಿಗಳೊಂದಿಗೆ ಚರ್ಚಿಸಿ ಯೋಜನೆ ರೂಪಿಸಲಾಗುವುದು.

ಎಲ್ಲಾ ರೈಲುಗಳನ್ನು ಜಿಲ್ಲಾ ಕೇಂದ್ರದಲ್ಲಿ ನಿಲ್ಲಿಸಬೇಕೆಂಬುದು ಜನರ ಒತ್ತಾಯವಾಗಿದೆ. ಸ್ಥಳೀಯ ಸಂಸದರು, ಶಾಸಕರು ಚರ್ಚಿಸಿ ಕ್ರಮ ಕೈಗೊಳ್ಳಲಾಗುವುದು. ಜನಸಂದಣಿ ಹಾಗೂ ಬೆಂಗಳೂರಿನ ಒತ್ತಡ ಕಡಿಮೆ ಮಾಡಲು ರೈಲುಗಳನ್ನು ನಿಲ್ಲಿಸಲು ಸೂಚಿಸಲಾಗುವುದು. ಅವಶ್ಯಕತೆವಿರುವ ಕಡೆಗಳಲ್ಲಿ ಶೀಘ್ರದಲ್ಲೇ ಸ್ಕೈ ವಾಲ್ಕ್‌ಗಳನ್ನು ನಿರ್ಮಿಸಲು ಇಂದೇ ಆದೇಶ ಹೊರಡಿಸಲಾಗುವುದು. ಹಲವಾರು ವರ್ಷಗಳಿಂದ ನೆನೆಗುದಿಗೆ ಬಿದ್ದಿದ್ದ ಸಣ್ಣಪುಟ್ಟ ಸಮಸ್ಯೆಗಳಿಗೆ ಪರಿಹಾರ ಕಂಡುಹಿಡಿಯಲಾಗಿದೆ. ಬೆಂಗಳೂರಿನ ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ರೈಲು ನಿಲ್ದಾಣವು ಎಷ್ಟು ಮುಖ್ಯವೋ ಬಿಡದಿ ರೈಲು ನಿಲ್ದಾಣ ಅಷ್ಟೇ ಮುಖ್ಯವಾಗಿದೆ. ಇದನ್ನು ಮೇಲ್ದರ್ಜೆಗೇರಿಸಲು ಆದ್ಯತೆ ನೀಡಲಾಗುವುದು ಎಂದು ಹೇಳಿದರು.

ಹೆಜ್ಜಾಲದಿಂದ ಚಾಮರಾಜನಗರಕ್ಕೆ 142 ಕಿ.ಮೀ, ಹೆಜ್ಜಾಲದಿಂದ ಕಗ್ಗಲೀಪುರ, ಹಾರೋಹಳ್ಳಿ, ಮರಳವಾಡಿ, ಕನಕಪುರ, ಹಲಗೂರು, ಮಳವಳ್ಳಿ, ಕೊಳ್ಳೇಗಾಲ, ಯಳಂದೂರು, ಚಾಮರಾಜನಗರದವರೆಗೆ ಸುಮಾರು 8 ರಿಂದ 9 ನಿಲ್ದಾಣಗಳು ಬರುತ್ತದೆ. ರಾಜ್ಯದ ಸಚಿವರು ಹಾಗೂ ಸ್ಥಳೀಯ ಶಾಸಕರು ಮುಖ್ಯಮಂತ್ರಿಗಳೊಂದಿಗೆ ಚರ್ಚಿಸಿ ಜಾಗ ನೀಡಿದರೆ ಈ ಮಾರ್ಗದಲ್ಲಿ ರೈಲುಗಳನ್ನು ಪ್ರಾರಂಭಿಸಲು ಯೋಜನೆ ರೂಪಿಸಲಾಗುವುದು ಎಂದರು.

ಈ ಸಂದರ್ಭದಲ್ಲಿ ಬೆಂಗಳೂರು ಗ್ರಾಮಾಂತರ ಲೋಕಸಭಾ ಕ್ಷೇತ್ರದ ಸಂಸದರಾದ ಡಾ. ಸಿ.ಎನ್. ಮಂಜುನಾಥ್, ಕರ್ನಾಟಕ ರಾಜ್ಯ ರಸ್ತೆ ಅಭಿವೃದ್ಧಿ ನಿಗಮದ ಅಧ್ಯಕ್ಷರು ಹಾಗೂ ಮಾಗಡಿ ವಿಧಾನಸಭಾ ಕ್ಷೇತ್ರದ ಶಾಸಕರಾದ ಎಚ್.ಸಿ. ಬಾಲಕೃಷ್ಣ, ಜಿಲ್ಲಾಧಿಕಾರಿ ಯಶವಂತ್ ವಿ. ಗುರುಕರ್, ನೈರುತ್ಯ ರೇಲ್ವೆಯ ಬೆಂಗಳೂರು ವಿಭಾಗದ ಹೆಚ್ಚುವರಿ ವಿಭಾಗೀಯ ರೈಲ್ವೇ ವ್ಯವಸ್ಥಾಪಕ ಪರಿಕ್ಷಿತ್ ಮೋಹಲ್ ಪೂರ್ಯ, ಸಾರ್ವಜನಿಕ ಸಂಪರ್ಕಾಧಿಕಾರಿ ಪ್ರಾಣೇಶ್ ಕೌಲಗಿ, ಹಿರಿಯ ವಿಭಾಗೀಯ ವಾಣಿಜ್ಯ ವ್ಯವಸ್ಥಾಪಕ ಕೃಷ್ಣ ಚೈತನ್ಯ, ಉಪ ಮುಖ್ಯ ಯೋಜನಾಧಿಕಾರಿ (ಗತಿಶಕ್ತಿ) ಶುಭಂ ಶರ್ಮ, ಹಿರಿಯ ವಿಭಾಗೀಯ ಇಂಜಿನಿಯರ್ ರಾಜೀವ್ ಶರ್ಮ ಸೇರಿದಂತೆ ಇತರರು ಉಪಸ್ಥಿತರಿದ್ದರು.

## ನೂತನ ವರ್ಷದ ದಿನದರ್ಶಿಕೆ ಬಿಡುಗಡೆ

ತಿ. ನರಸೀಪುರ: ಪಟ್ಟಣದ ಪೂಜಿತ್ ಮೆಡಿಕಲ್ ಮಾಲೀಕ ಕುಮಾರ್ ಅವರು ಹೊರತಂದಿರುವ ನೂತನ ವರ್ಷದ ವಿನೂತ ಶೈಲಿಯ ದಿನದರ್ಶಿಕೆಯನ್ನು ವಾಟಾಳು ಮಠದಲ್ಲಿ ಶ್ರೀ ಸಿದ್ದಲಿಂಗ ಶಿವಾಚಾರ್ಯ ಸ್ವಾಮಿಗಳು ಬಿಡುಗಡೆ ಮಾಡಿದರು.

ತಾಲೂಕಿನ ವಾಟಾಳು ಮಠದಲ್ಲಿ ಆಯೋಜಿಸಲಾಗಿದ್ದ ಶ್ರೀಗಳ 77ನೇ ವರ್ಷದ ವರ್ಧಂತೋತ್ಸವ ಕಾರ್ಯಕ್ರಮದ ಅಂಗವಾಗಿ ದಿನದರ್ಶಿಕೆ ಬಿಡುಗಡೆಗೊಳಿಸಿ, ಕುಮಾರ್ ಅವರಿಗೆ ಶುಭಾಶಯಗಳನ್ನು ಕೋರಿದರು.

ಈ ಸಂದರ್ಭದಲ್ಲಿ ಮಾತನಾಡಿದ ಶ್ರೀಗಳು, ದಿನದರ್ಶಿಕೆ ಪ್ರತಿಯೊಬ್ಬರಿಗೂ ಅಗತ್ಯವಿರುವ ಉಪಯುಕ್ತ ಸಾಧನವಾಗಿದೆ ಪೂಜಿತ್ ಮೆಡಿಕಲ್ ವತಿಯಿಂದ ಪ್ರಕಟಿಸಲಾದ ದಿನದರ್ಶಿಕೆಯ ಮುಖ ಪುಟದಲ್ಲಿ ಸಿದ್ದಗಂಗ ಶ್ರೀಗಳ ಭಾವ ಚಿತ್ರದ ಮುದ್ರಣ ಅತ್ಯಂತ ಆಕರ್ಷಕವಾಗಿದೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಕಾರ್ಯಕ್ರಮದಲ್ಲಿ ಪೂಜಿತ್ ಮೆಡಿಕಲ್ ಕುಮಾರ್, ಡಾ. ಮಲ್ಲಿಕಾರ್ಜುನ ಸ್ವಾಮಿ, ಎಸ್.ಕೆ. ಕಿರಣ್, ಸತ್ಯಪ್ಪ, ತೋಂಟೇಶ್, ಕಿರಗಸೂರು ಮಹದೇವಸ್ವಾಮಿ, ಆಡಿಟರ್ ಮಂಜುನಾಥ್, ಕುರುಬೂರು ಶಿವು, ಅಕ್ಕಿ ನಾಗಪ್ಪ, ರಾಜಶೇಖರ್ ಸೇರಿದಂತೆ ಹಲವರು ಉಪಸ್ಥಿತರಿದ್ದರು.



## ಡಿ.28ರಿಂದ 30ರವರೆಗೆ ರಾಜ್ಯಮಟ್ಟದ ಐದನೇ ವೈಜ್ಞಾನಿಕ ಸಮ್ಮೇಳನ

ಭಾರತೀನಗರ:-ಯಾದಗಿರಿ ಜಿಲ್ಲೆಯ ಸರ್ಕಾರಿ ಕ್ರೀಡಾಂಗಣದಲ್ಲಿ ಕರ್ನಾಟಕ ರಾಜ್ಯ ವೈಜ್ಞಾನಿಕ ಸಂಶೋಧನಾ ಪರಿಷತ್ತು (ರಿ), ದೊಡ್ಡಬಳ್ಳಾಪುರ ಬೆಂಗಳೂರು ಗ್ರಾಮಾಂತರ ಜಿಲ್ಲೆ ಇವದ ವತಿಯಿಂದ ಡಿ.28 ರಿಂದ 30 ರವರೆಗೆ ಮೂರು ದಿನಗಳ ಕಾಲ ರಾಜ್ಯಮಟ್ಟದ ಐದನೇ ವೈಜ್ಞಾನಿಕ ಸಮ್ಮೇಳನ ಜರುಗಲಿದೆ ಎಂದು ಕರ್ನಾಟಕ ರಾಜ್ಯ ವೈಜ್ಞಾನಿಕ ಸಂಶೋಧನಾ ಪರಿಷತ್ತಿನ ಅಧ್ಯಕ್ಷ ಚಿಕ್ಕರಸಿನಕೆರೆ ಸಿ.ಶಿವಲಿಂಗಯ್ಯ ತಿಳಿಸಿದರು.

ಪತ್ರಿಕಾ ಹೇಳಿಕೆ ನೀಡಿರುವ ಅವರು, ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆ ಕರ್ನಾಟಕ ಸರ್ಕಾರ ಬೆಂಗಳೂರು ಹಾಗೂ ಮಾನವ ಬಂಧುತ್ವ ವೇದಿಕೆ ರಾಜ್ಯ ಸಮಿತಿ ಮತ್ತು ಯಾದಗಿರಿ ಜಿಲ್ಲಾ ಘಟಕ ಇವರ ನೇತೃತ್ವದಲ್ಲಿ ಈ ಸಮ್ಮೇಳನ ಜರುಗಲಿದೆ. ಕರ್ನಾಟಕ ರಾಜ್ಯ ವೈಜ್ಞಾನಿಕ ಸಂಶೋಧನಾ ಪರಿಷತ್ತಿನ ಸಂಸ್ಥಾಪಕ ರಾಜ್ಯಾಧ್ಯಕ್ಷರಾದ ಡಾ ಹುಲಿಕಲ್ ನಟರಾಜ್ ರವರ ಸಾರಥ್ಯದಲ್ಲಿ ಶರಣ ಸಾಹಿತಿ ವಿಶ್ವಾರಾಧ್ಯ ಸತ್ಯಂಪೇಟೆ, ಲೋಕೊಪಯೋಗಿ ಸಚಿವ ಸತೀಶ್ ಜಾರಕಿಹೊಳಿ ರವರು ಭಾಗವಹಿಸಲ್ಲಿದ್ದಾರೆ. ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಬೇಕೆಂದು ಕೋರಿದರು. ನಮ್ಮ ವೈಜ್ಞಾನಿಕ ಸಂಶೋಧನಾ ಪರಿಷತ್ತು ಪ್ರತಿ ವರ್ಷದಂತೆ, ರಾಜ್ಯ ಮಟ್ಟದ ವಿಚಾರವಾದಿ ಎಚ್.ನರಸಿಂಹಯ್ಯ ಪ್ರಶಸ್ತಿಗೆ ಮಂಡ್ಯ ಜಿಲ್ಲೆಯಿಂದ ನಿವೃತ್ತ ವಿಜ್ಞಾನ ವಿಷಯ ಪರಿವೀಕ್ಷರಾದ ನಂಜರಾಜು, ರಾಜ್ಯ ಮಟ್ಟದ ಜೀವಮಾನ ಸಾಧನಾ ಪ್ರಶಸ್ತಿಗೆ ಪಾಂಡವಪುರ ಪುಸ್ತಕ ಮನೆ, ಪುಸ್ತಕ ಪ್ರೇಮಿ ಅಂಕೇಗೌಡ, ರಾಜ್ಯ ಮಟ್ಟದ ಚೈತನ ಶ್ರೀ ಪ್ರಶಸ್ತಿ ಗೆ ಕನ್ನಡ ಪ್ರಾಧ್ಯಾಪಕ, ವಿವಿಧ ಸಂಘಟನೆಗಳಲ್ಲಿ ಸಮಾಜ ಸೇವೆ ಮಾಡುತ್ತಿರುವ ವೈಜ್ಞಾನಿಕ ಚಿಂತಕಿ ಜಿ.ಉಷಾರಾಣಿ ಆಯ್ಕೆಯಾಗಿರುತ್ತಾರೆ.

# ನಂಜನಗೂಡಿನಲ್ಲಿ ರಾಷ್ಟ್ರಮಟ್ಟದ ಕರಾಟೆ ಪಂದ್ಯಾವಳಿ

ನಂಜನಗೂಡು. ಕರಾಟೆ ಒಂದು ಸಮರಕಲೆ, ಕರಾಟೆಯಲ್ಲಿ ತೊಡಗುವುದರಿಂದ ವ್ಯಕ್ತಿಯಲ್ಲಿ ದೈಹಿಕ ಶಕ್ತಿ, ಏಕಾಗ್ರತೆ, ಶಿಸ್ತು, ಮತ್ತು ಆತ್ಮವಿಶ್ವಾಸವನ್ನು ಹೆಚ್ಚಿಸುತ್ತದೆ ಎಂದು ವಿಶ್ವಕರ್ಮ ಅಭಿವೃದ್ಧಿ ನಿಗಮ ಮಾಜಿ ಅಧ್ಯಕ್ಷ ನಂದಕುಮಾರ್ ಹೇಳಿದರು.

ಅವರು ನಗರದ ಕಮಲಮ್ಮ ಗುರುಮಲ್ಲಪ್ಪ ಕಲ್ಯಾಣ ಮಂಟಪದಲ್ಲಿ ಓಕಿನೊವಾ ಕರಾಟೆ ಸಂಸ್ಥೆ ವತಿಯಿಂದ ಏರ್ಪಡಿಸಲಾಗಿದ್ದ ರಾಷ್ಟ್ರ ಮಟ್ಟದ ಮುಕ್ತ ಕರಾಟೆ ಪಂದ್ಯಾವಳಿಯನ್ನು ಉದ್ಘಾಟಿಸಿ ಮಾತನಾಡಿದರು.



ಕರಾಟೆ ತರಬೇತಿ ಪಡೆಯುವುದರಿಂದ ತುರ್ತು ಸಂದರ್ಭದಲ್ಲಿ ವ್ಯಕ್ತಿಯು ಸ್ವಯಂ ರಕ್ಷಣೆ ಪಡೆಯಲು ಸಹಾಯಕವಾಗಲಿದೆ, ಆದ್ದರಿಂದ ಗಂಡು-ಹೆಣ್ಣು ಎಂಬ ಭೇದ ಭಾವವಿಲ್ಲದೆ ಎಲ್ಲರೂ ಈ ಕಲೆಯನ್ನು ಕಲಿತುಕೊಳ್ಳಬೇಕು, ಕರಾಟೆ ತರಬೇತಿಯಿಂದ ನಮ್ಮ ಮಾನಸಿಕ ಮತ್ತು ದೈಹಿಕ ಆರೋಗ್ಯವನ್ನು ಹೆಚ್ಚಿಸುವ ಜೊತೆಗೆ ವ್ಯಕ್ತಿಯಲ್ಲಿ ಶಕ್ತಿ, ಚುರುಕುತನ, ಮುಖ್ಯವಾಗಿ ಶಿಸ್ತು, ಏಕಾಗ್ರತೆಯನ್ನು ಹೆಚ್ಚಿಸಿ ವ್ಯಕ್ತಿಯಲ್ಲಿ ಆತ್ಮವಿಶ್ವಾಸ ಬೆಳೆಸುತ್ತದೆ, ಆದ್ದರಿಂದ ಪ್ರತಿಯೊಬ್ಬರೂ ಕರಾಟೆ ತರಬೇತಿ ಪಡೆಯಬೇಕು ಎಂದರಲ್ಲದೆ ಕರಾಟೆ ಪದ್ಯಾವಳಿಯು ಸ್ಪರ್ಧಿಗಳು ವೇಗ ಮತ್ತು ನಿಖರತೆಯಿಂದ ತಮ್ಮ ತಂತ್ರಗಳನ್ನು ಪ್ರದರ್ಶನ ಮಾಡಿ ತಮ್ಮ ಪ್ರತಿಭೆಯನ್ನು ಪ್ರದರ್ಶಿಸುವ ಒಂದು ವೇದಿಕೆಯಾಗಿದೆ, ಅಲ್ಲದೆ ಕರಾಟೆ ಪಂದ್ಯಾವಳಿಯಲ್ಲಿ ಸ್ಪರ್ಧಿಸುವುದರಿಂದ ಸ್ಪರ್ಧಿಯು ವಿಶ್ವದ ವಿವಿಧ ದೇಶದ ಸ್ಪರ್ಧಿಗಳೊಂದಿಗೆ ಕಲಿಯಲು ಅವಕಾಶವಿದೆ, ಆದ್ದರಿಂದ ಎಲ್ಲಾ ಸ್ಪರ್ಧಿಗಳು ಸೋಲು ಗೆಲುವನ್ನು ಲೆಕ್ಕಿಸದೆ ಕ್ರೀಡಾ ಮನೋಭಾವನೆಯಿಂದ ಕ್ರೀಡೆಯಲ್ಲಿ ತೊಡಗಬೇಕು, ಪೋಷಕರು ಸಹ ತಮ್ಮ ಮಕ್ಕಳಲ್ಲಿ ಇರುವ ಪ್ರತಿಭೆಯನ್ನು ಪ್ರೋತ್ಸಾಹಿಸಿ ಪ್ರತಿಭೆ ಪ್ರದರ್ಶಿಸಲು ಅವಕಾಶ ಕಲ್ಪಿಸಬೇಕು ಎಂದು ಹೇಳಿದರು.

ಸಮಾರಂಭದಲ್ಲಿ ವನ್ಯ ಜೀವಿ ಸಂರಕ್ಷಕ ಸ್ನೇಕ್ ಬಸವರಾಜು, ಎಸ್. ಸುನಿಲ್ ಕುಮಾರ್, ಕರಾಟೆ ಪಂದ್ಯಾವಳಿ ಆಯೋಜಕರಾದ ಬಿ. ಕುಮಾರಸ್ವಾಮಿ, ಬಿ.ರಾಜೇಶ್, ರೆನ್ನಿ ಪಿ.ಭರತೇಶ್, ರಾಜೇಂದ್ರ, ಜಿ.ಡಿ. ಶರ್ಮ, ಶಿವರಾಜ್, ಸಂತೋಷ್ ಶರ್ಮಾ ಸೇರಿದಂತೆ ಹಲವಾರು ಪ್ರಮುಖರು ಉಪಸ್ಥಿತರಿದ್ದರು.

## ಸಂಕ್ಷಿಪ್ತ ಸುದ್ದಿ

# ಉಪಟಳ ನೀಡುತ್ತಿದ್ದ ಚಿರತೆ ಸೆರೆ: ನಿಟ್ಟುಸಿರು ಬಿಟ್ಟ ಜನತೆ

ಕೆ.ಆರ್.ಪೇಟೆ:– ತಾಲ್ಲೂಕಿನ ಬೂಕನಕೆರೆ ಹೋಬಳಿಯ ಮುದುಗೆರೆ ಗ್ರಾಮದ ಬಳಿ ರೈತರ ಸಾಕು ಪ್ರಾಣಿಗಳನ್ನು ತಿಂದು ಹಾಕುತ್ತಾ ರೈತರಿಗೆ ನಿತ್ಯ ಕಾಣಿಸಿಕೊಳ್ಳುತ್ತಿದ್ದ ಚಿರತೆಯನ್ನು ಅರಣ್ಯ ಇಲಾಖೆಯ ಅಧಿಕಾರಿಗಳು ಬೋನಿಟ್ಟು ಕಾರ್ಯಾಚರಣೆ ನಡೆಸಿ ಸೆರೆ ಹಿಡಿಯುವಲ್ಲಿ ಯಶಸ್ವಿಯಾಗಿದ್ದಾರೆ.

ಮದುಗೆರೆ ಗ್ರಾಮದ ರೈತ ರವೀಶ್ ಅವರಿಗೆ ಸೇರಿದ 3 ಮೇಕೆಗಳನ್ನು ಒಂದೇ ದಿನ ಹೊತ್ತೊಯ್ದು ತಿಂದು ಹಾಕುವ ಮೂಲಕ ಆತಂಕ ಸೃಷ್ಠಿಸಿದ್ದ ಚಿರತೆಯು ಕಳೆದ ಒಂದು ವಾರದಿಂದ ನಿತ್ಯ ಮದುಗೆರೆ ಗ್ರಾಮದ ಕಾಳಶೆಟ್ಟಿ, ತಿಮ್ಮಮ್ಮ, ದೊಡ್ಡಶೆಟ್ಟಿ, ಸಂಪಿಗೆಶೆಟ್ಟಿ, ಕೃಷ್ಣೇಗೌಡ ಅವರ ಜಮೀನಿನ ಬಳಿ ಕಾಣಿಸಿಕೊಂಡು ಸಾಕು ಪ್ರಾಣಿಗಳನ್ನು ತಿನ್ನಲು ಹೊಂಚು ಹಾಕುತ್ತಿತ್ತು. ಇದನ್ನು ಕಣ್ಣಾರೆ ಕಂಡ ರೈತರು ಅರಣ್ಯ ಇಲಾಖೆಯ ಅಧಿಕಾರಿಗಳಿಗೆ ಚಲನ–ವಲದದ ಬಗ್ಗೆ ಮಾಹಿತಿ ನೀಡಿ ದೂರು ನೀಡಿದ್ದರು.

ಈ ದೂರಿನ ಮೇರೆಗೆ ಕಾರ್ಯಪ್ರವೃತ್ತರಾದ ತಾಲ್ಲೂಕು ಅರಣ್ಯ ಸಂರಕ್ಷಣಾಧಿಕಾರಿ(ಆರ್.ಎಫ್.ಓ) ಅನಿತಾ ಮತ್ತು ಉಪ ಅರಣ್ಯ ಸಂರಕ್ಷಣಾಧಿಕಾರಿ ನಂದಕುಮಾರ್ ನೇತೃತ್ವದಲ್ಲಿ ಗುರುವಾರ ರಾತ್ರಿ ಬೋನಿಟ್ಟು ಕಾರ್ಯಾಚರಣೆ ನಡೆಸಿದ್ದರು. ಚಿರತೆಯು ಶುಕ್ರವಾರ ಬೆಳಿಗ್ಗೆ ಬೋನಿನಲ್ಲಿ ಸೆರೆಯಾಗಿದೆ. ಇದರಿಂದಾಗಿ ಮದುಗೆರೆ, ಮತ್ತೀಕೆರೆ ಗ್ರಾಮಗಳ ರೈತರಲ್ಲಿ ಆವರಿಸಿದ್ದ ಆತಂಕ ದೂರವಾಗಿದೆ. ಗ್ರಾಮಸ್ಥರ ದೂರನ್ನು ಆಲಿಸಿ ಸಕಾಲಕ್ಕೆ ಬೋನಿಟ್ಟು ಚಿರತೆಯನ್ನು ಸೆರೆಹಿಡಿಯುವಲ್ಲಿ ಯಶಸ್ವಿಯಾಗಿರುವ ಆರ್.ಎಫ್.ಓ ಅನಿತಾ ಹಾಗೂ ಎ.ಆರ್.ಎಫ್.ಓ ನಂದಕುಮಾರ್ ಮತ್ತು ಸಿಬ್ಬಂದಿ ವರ್ಗದವರನ್ನು ಮುದುಗೆರೆ ಗ್ರಾಮಸ್ಥರು ಕೃತಜ್ಞತೆಗಳನ್ನು ಸಲ್ಲಿಸಿದ್ದಾರೆ.

# ಕಥೆಗಾರ್ತಿ, ಖ್ಯಾತ ಅನುವಾದಕಿ ಸರಿತಾ ಜ್ಞಾನಾನಂದ ನಿಧನ

ಬೆಂಗಳೂರು: ಕನ್ನಡ ಕವಯತ್ರಿ, ಬರಹಗಾರ್ತಿ ಸರಿತಾ ಜ್ಞಾನಾನಂದ ಅವರು ಆರ್.ಆರ್.ನಗರದ ಖಾಸಗಿ ಆಸ್ಪತ್ರೆಯಲ್ಲಿ ನಿಧನರಾಗಿದ್ದಾರೆ.

ಲೇಖಕಿ, ಅನುವಾದಕಿಯಾಗಿದ್ದ ಸರಿತಾ ಅವರು ವಿವಿಧ ಭಾಷೆಗಳ ಪ್ರಸಿದ್ಧರ ಕಥೆ, ಕಾದಂಬರಿಗಳನ್ನು ಕನ್ನಡಕ್ಕೆ ಅನುವಾದ ಮಾಡಿದ್ದರು.

ಇವರು ಹಿಂದಿಯಲ್ಲಿ ರಾಷ್ಟ್ರಭಾಷಾ ಪ್ರವೀಣರಾಗಿರುವುದಲ್ಲದೇ ಕನ್ನಡ, ಇಂಗ್ಲಿಷ್, ತೆಲುಗು, ತಮಿಳು, ಮರಾಠಿ, ಮಲಯಾಳಂ ಹಾಗೂ ಸಂಸ್ಕೃತ ಭಾಷೆಗಳಲ್ಲಿಯೂ ಅವರು ಪ್ರಾವೀಣ್ಯತೆ ಸಾಧಿಸಿದ್ದರು. ಸರಿತಾ ಅವರು ಬೆಂಗಳೂರು ಹಾಗೂ ಕೆಜಿಎಫ್‌ಗಳಲ್ಲಿ ಶಾಲಾ ಶಿಕ್ಷಕರಾಗಿ ಕಾರ್ಯನಿರ್ವಹಿಸಿ ನಿವೃತ್ತಿ ಹೊಂದಿದ್ದರು.

ಸುಮಾರು 300ಕ್ಕೂ ಹೆಚ್ಚು ಸಣ್ಣ ಕಥೆಗಳನ್ನು ಸರಿತಾ ರಚಿಸಿದ್ದು, ನಾಡಿನ ಪ್ರಖ್ಯಾತ ಪತ್ರಿಕೆಗಳಲೆಲ್ಲಾ ಪ್ರಕಟಗೊಂಡಿವೆ.

# ವಿದ್ಯೆ ಯಾರೊಬ್ಬರ ಸ್ವತ್ತು ಅಲ್ಲ: ಟಿ.ಎಸ್ ಶ್ರೀವತ್ಸ



ಮೈಸೂರು: ವಿದ್ಯೆ ಯಾರೊಬ್ಬರ ಸ್ವತ್ತೂ ಅಲ್ಲ ಎಂದು ಕೃಷ್ಣರಾಜ ಕ್ಷೇತ್ರದ ಶಾಸಕ ಟಿ.ಎಸ್. ಶ್ರೀವತ್ಸ ಹೇಳಿದರು.

ನಗರದ ಊಟಿ ರಸ್ತೆಯ ಜೆಎಸ್‌ಎಸ್ ಪದವಿಪೂರ್ವ ಕಾಲೇಜಿನಲ್ಲಿ ಶನಿವಾರ ಏರ್ಪಡಿಸಿದ್ದ ಸಾಂಸ್ಕೃತಿಕ ಮತ್ತು ಕ್ರೀಡಾ ಚಟುವಟಿಕೆಗಳ ಸಮಾರೋಪ ಸಮಾರಂಭದ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ವಿದ್ಯೆ ಸಾಧಕರ ಸ್ವತ್ತು. ವಿದ್ಯೆ ಒಂದಿದ್ದರೆ ಏನು ಬೇಕಾದರೂ ಮಾಡಬಹುದು ಎನ್ನುವುದಕ್ಕೆ ಮೈಸೂರಿನಲ್ಲಿಯೇ ಹಲವಾರು ನಿದರ್ಶನಗಳಿವೆ. 11 ವರ್ಷದ ಬಾಲಕನೊಬ್ಬ ಸತತ 14 ಗಂಟೆಗಿಂತ ಹೆಚ್ಚು ವಿವೇಕಾನಂದರನ್ನು ಕುರಿತು ಮಾತನಾಡಿ, ವಿಶ್ವ ದಾಖಲೆ ಮಾಡಿದ್ದಾನೆ. ಅದೇ ರೀತಿ ನೀವು ಕೂಡ ವಿದ್ಯೆಯನ್ನು ಚೆನ್ನಾಗಿ ಕಲಿಯಬೇಕು. ವಿದ್ಯೆ ಜೊತೆಗೆ ಸಂಸ್ಕಾರವು ಮುಖ್ಯ. ವಿದ್ಯಾರ್ಥಿಗಳು ದೇಶ, ನಾಡು, ಗುರುಹಿರಿಯರನ್ನು ಪ್ರೀತಿಸಬೇಕು. ದೇಶದ ಸತ್ಪ್ರಜೆಗಳಾಗಿ ಬೆಳೆಯಬೇಕು ಎಂದು ಅವರು ಕರೆ ನೀಡಿದರು.

ಹಿರಿಯ ಪತ್ರಕರ್ತ ಅಂಶಿ ಪ್ರಸನ್ನಕುಮಾರ್ ಸಮಾರೋಪ ಭಾಷಣ ಮಾಡಿದರು. ಮುಖ್ಯ ಅತಿಥಿಯಾಗಿದ್ದ ಜೆಎಸ್‌ಎಸ್ ಮಹಾವಿದ್ಯಾಪೀಠದ ಕಾಲೇಜು ಶಿಕ್ಷಣ ವಿಭಾಗದ ಸಹಾಯಕ ನಿರ್ದೇಶಕ ಬಿ.ನಿರಂಜನಮೂರ್ತಿ ಮಾತನಾಡಿದರು. ಕಾಲೇಜಿನ ಪ್ರಾಂಶುಪಾಲ ಎಸ್.ನಂಜುಂಡಸ್ವಾಮಿ, ಸರಸ್ವತಿಪುರಂ ಜೆಎಸ್‌ಎಸ್ ಪಿಯು ಕಾಲೇಜಿನ ಪ್ರಾಂಶುಪಾಲ ಗುರುಪಾದಸ್ವಾಮಿರನ್ನು ಸನ್ಮಾನಿಸಲಾಯಿತು.

ಸಾಂಸ್ಕೃತಿಕ ಮತ್ತು ಕ್ರೀಡಾ ಚಟುವಟಿಕೆಗಳಲ್ಲಿ ಭಾಗವಹಿಸಿ ವಿಜೇತರಾದ ವಿದ್ಯಾರ್ಥಿಗಳಿಗೆ ಬಹುಮಾನ ವಿತರಿಸಲಾಯಿತು. ಪ್ರಾಂಶುಪಾಲ ಎಸ್.ನಂಜುಂಡಸ್ವಾಮಿ ಸ್ವಾಗತಿಸಿದರು. ಸಾಂಸ್ಕೃತಿಕ ವೇದಿಕೆಯ ಸಂಚಾಲಕ ಜಿ. ರಮೇಶ್, ಕ್ರೀಡಾ ಸಂಚಾಲಕ ಟಿ. ಅರವಿಂದ ಇದ್ದರು. ಉಪನ್ಯಾಸಕ ಶಿವಕುಮಾರ್ ಸಾಂಸ್ಕೃತಿಕ ಚಟುವಟಿಕೆಗಳ ವರದಿ, ಉಪನ್ಯಾಸಕಿ ಪಿ. ಮಂಜುಳಾ ಕ್ರೀಡಾ ಚಟುವಟಿಕೆಗಳ ವರದಿ ಓದಿದರು. ಅದಿತಿ ಪ್ರಾರ್ಥಿಸಿದರು.

ಉಪನ್ಯಾಸಕ ಎಚ್.ಆರ್. ಗಾಯತ್ರಿ ವಂದಿಸಿದರು. ಉಪನ್ಯಾಸಕ ಪಿ.ಎಸ್. ಮಂಜುನಾಥ್ ಕಾರ್ಯಕ್ರಮ ನಿರೂಪಿಸಿದರು.

## ರಾಷ್ಟ್ರೀಯ ಡ್ರ್ಯಾಗ್ ರೇಸಿಂಗ್ ಚಾಂಪಿಯನ್‌ಷಿಪ್

# 2 ಸ್ಪರ್ಧೆ ಗೆದ್ದ ಬೆಂಗಳೂರಿನ ಹೇಮಂತ್ ಮುದ್ದಪ್ಪ



ಚೆನ್ನೈ: ಬೆಂಗಳೂರಿನ ಹೇಮಂತ್ ಮುದ್ದಪ್ಪ ಅವರು, ಎಂಎಂಎಸ್‌ಸಿ ಎಫ್‌ಎಂಎಸ್‌ಸಿಐ ರಾಷ್ಟ್ರೀಯ ಮೋಟರ್‌ಸೈಕಲ್ ಡ್ರಾಗ್ ರೇಸಿಂಗ್ ಚಾಂಪಿಯನ್‌ಷಿಪ್‌ನಲ್ಲಿ ಶನಿವಾರ ಎರಡು ಗೆಲುವು ಮತ್ತೊಂದು ಪೋಡಿಯಂ ಫಿನಿಷ್ ಸಾಧಿಸಿದರು. ಈ ರೇಸ್‌ನಲ್ಲಿ ತಮ್ಮ ಹಿಡಿತ ಮುಂದುವರಿಸಿದರು.

ಮಂತ್ರ ರೇಸಿಂಗ್ ಪರ ರೈಡಿಂಗ್ ಮಾಡಿದ ಮುದ್ದಪ್ಪ ಅನ್‌ರಿಸ್ಟ್ರಿಕ್ಟೆಡ್ ಸೂಪರ್ ಸ್ಪೋರ್ಟ್ 4ಸ್ಟ್ರೋಕ್ ಕ್ಲಾಸ್ ಸ್ಪರ್ಧೆಯಲ್ಲಿ 8.269 ಸೆ.ಗಳಲ್ಲಿ ಕ್ವಾರ್ಟರ್ ಮೈಲು ದೂರ ಕ್ರಮಿಸಿದರು. ಅವರು ಫಾಸ್ಟ್ ಟ್ರ್ಯಾಕ್ ರೇಸಿಂಗ್ ಇಂಡಿಯಾದ ಹನುಮಾನ್ ಪಾವ್ಲೆ (8.301 ಸೆ.) ಅವರಿಂದ ತೀವ್ರ ಪೈಪೋಟಿ ಎದುರಿಸಿದರು.

ಮುದ್ದಪ್ಪ ಮತ್ತು ಪಾವ್ಲೆ ಅವರು ಈಗ ತಲಾ 55 ಚಾಂಪಿಯನ್‌ಷಿಪ್ ಪಾಯಿಂಟ್ಸ್ ಹೊದಿದ್ದಾರೆ. ಅಲಿಮೊನ್ ಸಾಯಿ ದಲ್ವಿ 53 ಪಾಯಿಟ್ಸ್ ಗಳಿಸಿದ್ದಾರೆ.

ಮುದಪ್ಪ ಅವರು 1051–1650ಸಿಸಿ ಕೆಟಗರಿಯಲ್ಲೂ ಜಯಶಾಲಿಯಾದರು. 8.541 ಸೆ.ಗಳಲ್ಲಿ ನಿಗದಿ ಅಂತರ ಕ್ರಮಿಸಿದರು. ಮುಜಾಹಿದ್ ಪಾಷಾ (8.629 ಸೆ) ಮತ್ತು ಅಲಿಮೊನ್ ಸಾಯಿ ದಲ್ವಿ (8.694 ಸೆ.) ಕ್ರಮವಾಗಿ ನಂತರದ ಸ್ಥಾನಗಳನ್ನು ಪಡೆದರು.

ಮುದ್ದಪ್ಪ ಈಗ ಒಟ್ಟು75 ಪಾಯಿಂಟ್ಸ್ ಹೊಂದಿದ್ದು ಟ್ರೋಫಿ ಗೆಲ್ಲುವುದು ಬಹುತೇಕ ಖಚಿತವಾಗಿದೆ. ಪಾಶಾ (54) ಮತ್ತು ದಲ್ವಿ (38) ಬಹಳ ಹಿಂದೆಯಿದ್ದಾರೆ.

851–1050 ಸಿಸಿ ವಿಭಾಗದಲ್ಲಿ ಮಂಬೈನ ಪಾವ್ಲೆ (8.338 ಸೆ.) ಅಲ್ಪಅಂತರದಲ್ಲಿ ಮುದ್ದಪ್ಪ ಅವರನ್ನು ಹಿಂದೆಹಾಕಿದರು. ಆದರೆ 15 ಬಾರಿಯ ಡ್ರ್ಯಾಗ್ ರೇಸ್ ಚಾಂಪಿಯನ್ ಆಗಿರುವ ಮುದ್ದಪ್ಪ ಒಟ್ಟಾರೆ 68 ಪಾಯಿಂಟ್ಸ್ ಗಳಿಸಿದ್ದು ಮುಂದಿದ್ದಾರೆ. ಪಾವ್ಲೆ 53 ಪಾಯಿಂಟ್ಸ್ ಹೊಂದಿದ್ದಾರೆ.

ಸೂಪರ್ ಸ್ಪೋರ್ಟ್ಸ್ 2ಸ್ಟ್ರೋಕ್ (131–165 ಸಿಸಿ) ವಿಭಾಗದ ಕಿರೀಟ ಬೆಂಗಳೂರಿನ ಪ್ರಶಾಂತ್ ಎಸ್. ಪಾಲಾಯಿತು.

# ವನ್ಯಜೀವಿಗಳ ನೂತನ ದಿನದರ್ಶಿಕೆ ಬಿಡುಗಡೆ



ಮೈಸೂರು: ಪತ್ರಿಕಾ ಹಾಗೂ ವನ್ಯಜೀವಿ ಛಾಯಾಗ್ರಾಹಕರಾದ ಎಸ್.ಆರ್.ಮಧುಸೂದನ್ ಹಾಗೂ ರವಿಶಂಕರ್ ಹೊರ ತಂದಿರುವ ವನ್ಯಜೀವಿ, ಮೈಸೂರು ಸುತ್ತಮುತ್ತಲಿನ ಅಪರೂಪದ ಪಕ್ಷಿಗಳನ್ನು ಒಳಗೊಂಡಿರುವ ನೂತನ ವರ್ಷದ ಕ್ಯಾಲೆಂಡರನ್ನು ಜಿಲ್ಲಾ ಪತ್ರಕರ್ತರ ಸಂಘದಲ್ಲಿ ಗಣ್ಯರು ಬಿಡುಗಡೆಗೊಳಿಸಿದರು.

ವನ್ಯಜೀವಿ ಛಾಯಾಗ್ರಾಹಕ ಕೃಪಾಕರ್ ಮಾತನಾಡಿ, ಕ್ಯಾಲೆಂಡರ್ ಸಂಸ್ಕೃತಿಗೆ ಬಹು ದೊಡ್ಡ ಇತಿಹಾಸವಿದೆ. ಮೊದಲು ದೇವರ ಫೋಟೋಗಳು ಇದ್ದ ಕ್ಯಾಲೆಂಡರ್‌ಗಳೇ ಎಲ್ಲೆಲ್ಲೂ ಕಾಣಿಸುತ್ತಿದ್ದವು. ಆದರೆ, ಈಗ ಕಾಲ ಬದಲಾಗಿದೆ. ಕ್ಯಾಲೆಂಡರ್‌ಗಳಲ್ಲಿ ಈಗ ಇರುವ ವಿಷಯಗಳೇ ಬೇರೆಯಾಗಿವೆ. ಸದ್ಯದಲ್ಲಿ ಮಾನವ– ಹುಲಿ ಸಂಘರ್ಷ ಹೆಚ್ಚು ಚರ್ಚೆಗೆ ಒಳಗಾಗುತ್ತಿದೆ. ಆದರೆ, ವನ್ಯಜೀವಿಗಳನ್ನೂ ವೈಜ್ಞಾನಿಕ ಮನೋಭಾವದಿಂದ ನೋಡಬೇಕಾದ ಅಗತ್ಯವಿದೆ. ವೈಜ್ಞಾನಿಕ ಬೆಳವಣಿಗೆಯನ್ನು ಈ ನಿಟ್ಟಿನಲ್ಲಿ ನಾವು ಪರಿಣಾಮಕಾರಿಯಾಗಿ ಬಳಸಿಕೊಳ್ಳುತ್ತಿಲ್ಲ. ಇದೇ ವೇಳೆ ಮಾನವ– ಹುಲಿ ಸಂಘರ್ಷಕ್ಕೆ ಕಾರಣವೇನು ಎಂಬ ಬಗ್ಗೆಯೂ ಚಿಂತನೆ ನಡೆಸಬೇಕಾಗಿದೆ. ಪ್ರಾಣಿಗಳ ಸಂರಕ್ಷಣೆಯಲ್ಲಿ ನಮ್ಮ ಹೊಣೆಗಾರಿಕೆ ಏನು ಎಂಬ ಬಗ್ಗೆಯೂ ಯೋಚಿಸಬೇಕು. ಈಗ ಬಿಡುಗಡೆಗೊಳಿಸಿರುವ ಕ್ಯಾಲೆಂಡರ್‌ನಲ್ಲಿನ ವನ್ಯಜೀವಿ, ಪಕ್ಷಿಗಳ ಚಿತ್ರಗಳು ಅಂತಹ ಕೆಲಸ ಮಾಡುತ್ತವೆ ಎಂದರು.

ಮತ್ತೋರ್ವ ವನ್ಯಜೀವಿ ಛಾಯಾಗ್ರಾಹಕ ಸೇನಾನಿ ಮಾತನಾಡಿ, ಇಂದಿನ ದಿನಗಳಲ್ಲಿ ಹುಲಿಯನ್ನು ಖಳ ಎಂದು ಬಿಂಬಿಸಲಾಗುತ್ತಿದೆ. ಆದರೆ ಈ ಕ್ಯಾಲೆಂಡರ್ ಹುಲಿಯ ಬಗ್ಗೆ ಪ್ರೀತಿ ಮೂಡಿಸುವ ಕೆಲಸ ಮಾಡಿದೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ನಿವೃತ್ತ ಅರಣ್ಯಾಧಿಕಾರಿ ಕಾಂತರಾಜು ಮಾತನಾಡಿ, ಹುಲಿ ಎಂದಿಗೂ ನರಭಕ್ಷಕ ಆಗುವುದಿಲ್ಲ. ಆದರೆ ತನ್ನ ರಕ್ಷಣೆಗಾಗಿ ಮಾತ್ರ ದಾಳಿ ಮಾಡುತ್ತದೆ. ಹೀಗಾಗಿ ಪ್ರಾಣಿಗಳಿಗೂ ಸಹಾ ನಮ್ಮಷ್ಟೇ ಪ್ರಾಧಾನ್ಯತೆ ನೀಡಬೇಕೆಂದರು.

ಎಸ್.ಆರ್.ಮಧುಸೂದನ್ ಮಾತನಾಡಿ, ವನ್ಯಜೀವಿಗಳ ಬಗ್ಗೆ ಅರಿವು ಸಾಮಾನ್ಯ ಜನರಿಗೂ ಮೂಡುವಂತೆ ಮಾಡುವ ಉದ್ದೇಶ ಈ ಕ್ಯಾಲೆಂಡರ್‌ನದ್ದಾಗಿದೆ. ಮಾನವ– ವನ್ಯಜೀವಿ ಸಂಘರ್ಷ ಚರ್ಚೆಗೆ ಒಳಗಾಗುತ್ತಿರುವ ಈ ದಿನಗಳಲ್ಲಿ ಪ್ರಾಣಿಗಳ ಬಗ್ಗೆ ಕಾಳಜಿ, ದಯೆ ಮೂಡಿಸುವ ನಿಟ್ಟಿನಲ್ಲಿಯೂ ಕ್ಯಾಲೆಂಡರ್ ರೂಪಗೊಂಡಿದೆ ಎಂದರು.

ಛಾಯಾಗ್ರಾಹಕ ರವಿಶಂಕರ್, ಸ್ನೇಕ್ ಶ್ಯಾಮ್, ಮಹೇಶ್ ಕುಮಾರ್ ಇನ್ನಿತರರು ಇದ್ದರು.

# ಹೋರಾಟಗಾರರ ವಿರುದ್ಧ ಷಡ್ಯಂತ್ರಕ್ಕೆ ಖಂಡನೀಯ

ಮೈಸೂರು ಎಚ್.ಡಿ. ಕೋಟೆ ಹಾಗೂ ಹೊಂದಿಕೊಂಡ ಅರಣ್ಯದಲ್ಲಿ ಟೈಗರ್ ಸಫಾರಿ ಮತ್ತು ಅಕ್ರಮ ರೆಸಾರ್ಟ್‌ಗಳ ವಿರುದ್ಧ ಧ್ವನಿಯೆತ್ತಿದ ಸೇವ್ ಕಬಿನಿ ತಂಡದ ಸದಸ್ಯರು, ಪರಿಸರ ಪ್ರೇಮಿಗಳು ಮತ್ತು ಹೋರಾಟಗಾರರನ್ನು ಪ್ರಭಾವಿ ರಾಜಕಾರಣಿಗಳು ಹಾಗೂ ರೆಸಾರ್ಟ್ ಮಾಲೀಕರು ಗುರಿಯಾಗಿರಿಸಿಕೊಂಡು ಸಮಸ್ಯೆ ಸೃಷ್ಟಿಸುತ್ತಿದ್ದಾರೆ ಎಂದು ತಂಡದ ಸದಸ್ಯ ಮಧುಕೇಶ್ ಆರೋಪಿಸಿದರು.

ನಗರದಲ್ಲಿ ಸುದ್ದಿಗಾರರೊಡನೆ ಮಾತನಾಡಿ, ಇದಕ್ಕೆ ಉದಾಹರಣೆಯಾಗಿ ಅಕ್ರಮ ರೆಸಾರ್ಟ್ ವಿರುದ್ಧ ಹಾಗೂ ಟೈಗರ್ ಸಫಾರಿ ಖಂಡಿಸಿ ಮಾತನಾಡಿದ ವಕೀಲ ವಿ. ರವಿಕುಮಾರ್ ಅವರ ವಿರುದ್ಧ ಅಪಪ್ರಚಾರ ಮಾಡಿ, ರಾಜ್ಯ ಬಾರ್ ಕೌನ್ಸಿಲ್ ಸದಸ್ಯತ್ವದಿಂದ ಹೊರ ಹಾಕಲಾಗಿದೆ. ಇದಕ್ಕೂ ಮೊದಲು ಅಕ್ರಮ ರೆಸಾರ್ಟ್ ಕುರಿತಂತೆ ರಾಜಕಾರಣಿಗಳು ಹಾಗೂ ಅಂತಹವುಗಳ ವಿರುದ್ಧ ಇವರು ಆಡಿದ ಮಾತು, ವಿಡಿಯೋಗಳನ್ನು ಸಾಮಾಜಿಕ ಮಾಧ್ಯಮಗಳಿಂದ ಡಿಲಿಟ್ ಮಾಡುವಂತೆ ಒತ್ತಡ ಹೇರಲಾಗಿತ್ತು. ಆದರೆ ಇದಕ್ಕೆ ಒಪ್ಪದಿದ್ದಾಗ ಈ ರೀತಿ ಮಾಡಲಾಗಿದೆ ಎಂದು ಆರೋಪಿಸಿದರು.

ಅಲ್ಲದೆ, ಸೇವ್ ಕಬಿನಿ ತಂಡದ ಸದಸ್ಯರ ವಿರುದ್ಧ ಅಪಪ್ರಚಾರ ಸರಿಯಲ್ಲ. ತಂಡದ ವಕೀಲರ ವಿರುದ್ಧ ಅಪಪ್ರಚಾರ ಹೀಗೇ ಮುಂದುವರಿದಲ್ಲಿ ದೊಡ್ಡ ಹೋರಾಟ ನಡೆಸಬೇಕಾಗುತ್ತದೆ ಎಂದು ಎಚ್ಚರಿಸಿದರು.

# ಎಂಎಸ್‌ಪಿ ಖಾತರಿಗೆ ಆಗ್ರಹಿಸಿ ಹೋರಾಟ



ಬೆಂಗಳೂರು: ಕೃಷಿ ಉತ್ಪನ್ನಗಳಿಗೆ ನೀಡಲಾಗುವ ಕನಿಷ್ಠ ಬೆಂಬಲ ಬೆಲೆಗೆ (ಎಂಎಸ್‌ಪಿ) ಕಾನೂನಿನ ಖಾತರಿ ಒದಗಿಸಬೇಕು ಎಂದು ಕೇಂದ್ರ ಸರ್ಕಾರವನ್ನು ಆಗ್ರಹಿಸಿ ಹೋರಾಟ ನಡೆಸಲಾಗುವುದು ಎಂದು ಸಂಯುಕ್ತ ಕಿಸಾನ್ ಮೋರ್ಚಾದ ಮುಖಂಡ ಜಗಜೀತ್ ಸಿಂಗ್ ದಲ್ಲೆವಾಲ ಅವರು ಹೇಳಿದರು.

ಶನಿವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಹೋರಾಟದ ರೂಪುರೇಷೆಗಳ ಕುರಿತು ಚರ್ಚಿಸಲು, ಜನವರಿ 8ರಂದು ದೆಹಲಿಯಲ್ಲಿ ನಡೆಯಲಿರುವ ಸಭೆಗೆ ಎಲ್ಲ ರೈತ ಸಂಘಗಳ ಪ್ರಮುಖರನ್ನು ಕರೆಯಲಾಗಿದೆ ಎಂದು ಮಾಹಿತಿ ನೀಡಿದರು.

ಸುಪ್ರೀಂ ಕೋರ್ಟ್ ನೇಮಿಸಿದ್ದ ಉನ್ನತಾಧಿಕಾರ ಸಮಿತಿ ಮತ್ತು ಕೃಷಿ ವ್ಯವಹಾರಗಳ ಸಂಸದೀಯ ಸಮಿತಿ ವರದಿ ಸಲ್ಲಿಸಿವೆ. ಎಂಎಸ್‌ಪಿಗೆ ಕಾನೂನಿನ ಖಾತರಿ ಒದಗಿಸಬೇಕು ಎಂದು ಶಿಫಾರಸು ಮಾಡಿವೆ. ಆದರೆ ಕೇಂದ್ರ ಸರ್ಕಾರವು ಈ ಬಗ್ಗೆ ತುಟಿಬಿಚ್ಚುತ್ತಿಲ್ಲ. ಹೀಗಾಗಿ ಕೇಂದ್ರ ಸರ್ಕಾರದ ವಿರುದ್ಧ ಮತ್ತೊಂದು ಸುತ್ತಿನ ಹೋರಾಟ ನಡೆಸುವುದು ಅನಿವಾರ್ಯ ಎಂದರು.

ಕೃಷಿ ಕ್ಷೇತ್ರದಲ್ಲಿ ಸ್ವಾವಲಂಬನೆ ಸಾಧಿಸಬೇಕು ಎಂದು ಪ್ರಧಾನಿ ನರೇಂದ್ರ ಮೋದಿ ಅವರು ಹೇಳುತ್ತಾರೆ. ಆದರೆ ಕೃಷಿ ಉತ್ಪನ್ನಗಳಿಗೆ ಎಂಎಸ್‌ಪಿ ಒದಗಿಸದೆ, ಆಮದು ಉತ್ತೇಜಿಸುತ್ತಿದ್ದಾರೆ. ಪ್ರತಿ ಆರ್ಥಿಕ ವರ್ಷದಲ್ಲಿ ಸರಾಸರಿ 2.50 ಲಕ್ಷ ಕೋಟಿ ಮೌಲ್ಯದಷ್ಟು ಕೃಷಿ ಉತ್ಪನ್ನಗಳನ್ನು ಆಮದು ಮಾಡಿಕೊಳ್ಳಲಾಗುತ್ತಿದೆ. ಇದರಿಂದ ದೇಶದ ರೈತರಿಗೆ ನಷ್ಟವಾಗುತ್ತಿದೆ. ಕೇಂದ್ರದ ಅವೈಜ್ಞಾನಿಕ ನೀತಿಗಳಿಂದ ದೇಶದಾದ್ಯಂತ 7 ಲಕ್ಷಕ್ಕೂ ಹೆಚ್ಚು ರೈತರು ಆತ್ಮಹತ್ಯೆ ಮಾಡಿಕೊಂಡಿದ್ದಾರೆ ಎಂದರು.

ಕಬ್ಬು ಬೆಳೆಗಾರರ ಸಂಘದ ಅಧ್ಯಕ್ಷ ಕುರುಬೂರು ಶಾಂತಕುಮಾರ್, ರಾಜ್ಯ ಸರ್ಕಾರವು ಕಬ್ಬಿಗೆ ಹೆಚ್ಚುವರಿ ಬೆಲೆ ನಿಗದಿ ಮಾಡಿದ್ದರ ವಿರುದ್ಧ ಸಕ್ಕರೆ ಕಾರ್ಖಾನೆ ಮಾಲೀಕರು ನ್ಯಾಯಾಲಯಕ್ಕೆ ಹೋಗಿದ್ದರು. ನ್ಯಾಯಾಲಯವು ಅವರ ಅರ್ಜಿಯನ್ನು ತಿರಸ್ಕರಿಸಿದೆ. ಸಕ್ಕರೆ ಕಾರ್ಖಾನೆ ಮಾಲೀಕರು ಈಗಲಾದರೂ ಕಬ್ಬು ಬೆಳೆಗಾರರಿಗೆ ಅವರ ಪಾಲಿನ ಹಣವನ್ನು ಪಾವತಿ ಮಾಡಬೇಕು ಎಂದು ಒತ್ತಾಯಿಸಿದರು.

# ಗಂಡು ಅಥವಾ ಹೆಣ್ಣು ಮಗುನೇ ಪಡೆಯಲು ಆಯುರ್ವೇದದಲ್ಲಿ ಔಷಧ ಇದೆ: ಬಾರ್ಕೂರು ಸ್ವಾಮೀಜಿ



ಬೆಂಗಳೂರು: ಆಯುರ್ವೇದ ಚಿಕಿತ್ಸಾ ಪದ್ಧತಿಯಡಿ ಸ್ವಇಚ್ಛೆಯ ಮಗು ಪಡೆಯಲೂ ಈ ಹಿಂದೆ ಔಷಧ ಒದಗಿಸಲಾಗುತ್ತಿತ್ತು. ನಮ್ಮ ದೇಶಕ್ಕೆ ಹಿರಿಮೆ ತರುವ ಈ ಔಷಧದ ಬಗ್ಗೆ ವೈಜ್ಞಾನಿಕ ಸಂಶೋಧನೆ ನಡೆಸುವ ಬದಲು, ಅದನ್ನು ನಿಷೇಧಿಸಲಾಗಿದೆ ಎಂದು ಬಾರ್ಕೂರು ಮಹಾಸಂಸ್ಥಾನದ ವಿಶ್ವಸಂತೋಷ ಭಾರತಿ ಸ್ವಾಮೀಜಿ ಹೇಳಿದರು.

ಆಯುಷ್ ಸಚಿವಾಲಯ ಹಾಗೂ ರಾಜ್ಯ ಆಯುಷ್ ಇಲಾಖೆಯ ಸಹಯೋಗದಲ್ಲಿ ಕಜೆ ಆಯುರ್ವೇದಿಕ್ ಚಾರಿಟೇಬಲ್ ಫೌಂಡೇಷನ್ ಹಮ್ಮಿಕೊಂಡಿರುವ ದ್ವಿತೀಯ ಆಯುರ್ವೇದ ವಿಶ್ವ ಸಮ್ಮೇಳನದ ಮೂರನೆ ದಿನವಾದ ಶನಿವಾರ ನಡೆದ ಕಾರ್ಯಕ್ರಮದಲ್ಲಿ ಸಾನ್ನಿಧ್ಯ ವಹಿಸಿ ಮಾತನಾಡಿದರು.

ಸುಶ್ರುತ ಸಂಹಿತೆಯ ಪುಂಸವನ ವಿಧಿಯಲ್ಲಿ ಗಂಡು–ಅಥವಾ ಹೆಣ್ಣು ಮಗುವನ್ನು ಪಡೆಯಲು ಗಿಡಮೂಲಿಕೆಯ ಔಷಧದ ಬಗ್ಗೆ ಉಲ್ಲೇಖವಿದೆ. ರಾಜರ ಕಾಲದಲ್ಲಿ ಗಂಡು ಮಗು ಹೊಂದಿರುವವರಿಗೆ ಹೆಣ್ಣು ಮಗು ಪಡೆಯಲು, ಹೆಣ್ಣು ಮಗು ಹೊಂದಿರುವವರಿಗೆ ಗಂಡು ಮಗು ಪಡೆಯಲು ಸುಶ್ರುತ ಮತ್ತು ವಾಗ್ಭಟ ಔಷಧ ಸಂಶೋಧಿಸಿದ್ದರು. ಲಕ್ಷ್ಮಣ ಬೇರಿನ ರಸವನ್ನು ನಿಗದಿತ ಮುಹೂರ್ತದಲ್ಲಿ ತೆಗೆದು, ಗರ್ಭಿಣಿಯ ಮೂಗಿನ ಮೂಲಕ ಆ ರಸವನ್ನು ಗೊತ್ತುಪಡಿಸಲಾದ ವಿಧಾನದಲ್ಲಿ ಹಾಕಲಾಗುತ್ತದೆ.

ಈ ಬಗ್ಗೆ 10–12 ಶ್ಲೋಕಗಳನ್ನು ಬರೆಯಲಾಗಿದೆ. ಈ ರಸವು ವರ್ಣತಂತುಗಳಲ್ಲಿ (ಕ್ರೋಮೋಸೋಮ್) ವ್ಯತ್ಯಾಸ ಮಾಡಿ, ಇಚ್ಛೆಯ ಮಗು ಪಡೆಯಲು ಸಹಕಾರಿಯಾಗುತ್ತಿತ್ತು. ಈ ಔಷಧದ ಬಗ್ಗೆ ಸಂಶೋಧನೆಯಾಗಬೇಕು ಎಂದು ಹೇಳಿದರು.

ಮಿದುಳಿನಲ್ಲಿ 72 ಸಾವಿರ ನರತಂತುಗಳು ಇರುವ ಬಗ್ಗೆ ಮೂರು ಸಾವಿರ ವರ್ಷಗಳ ಹಿಂದೆಯೇ ಸುಶ್ರುತ ಸಂಹಿತೆಯಲ್ಲಿ ಉಲ್ಲೇಖಿಸಲಾಗಿದೆ. ಈಗ ಸಿಟಿ ಸ್ಕ್ಯಾನ್ ಮೂಲಕ ಹೇಳುವುದನ್ನು, ವಿದ್ಯುತ್ ಇಲ್ಲದ ಕಾಲದಲ್ಲಿಯೇ ಹೇಳಿರುವುದು ನಮ್ಮ ದೇಶದ ಹಿರಿಮೆ. ಸರ್ಪಸುತ್ತನ್ನು ಮೂರೇ ದಿನದಲ್ಲಿ ಗುಣಪಡಿಸುವ ಔಷಧ ಆಯುರ್ವೇದಲ್ಲಿದೆ ಎಂದರು.

ಹುಬ್ಬಳ್ಳಿಯ ಮೂರುಸಾವಿರ ಮಠದ ಪೀಠಾಧಿಪತಿ ಗುರುಸಿದ್ಧ ರಾಜಯೋಗೀಂದ್ರ ಸ್ವಾಮೀಜಿ, ಭಾರತೀಯ ಆರೋಗ್ಯ ಸಂಸ್ಕೃತಿಯ ಮೂಲ ಆಯುರ್ವೇದ. ಎಲ್ಲ ಗಿಡಮೂಲಿಕೆಗಳ ಜ್ಞಾನ ಎಲ್ಲರಿಗೂ ಲಭ್ಯವಾಗುವುದಿಲ್ಲ. ಅಷ್ಟು ಗಿಡಮೂಲಿಕೆ ಪ್ರಪಂಚದಲ್ಲಿದೆ. ಆಯುರ್ವೇದದಲ್ಲಿ ಎಲ್ಲ ರೋಗಕ್ಕೂ ಔಷಧಗಳಿವೆ. ನಮ್ಮ ಸಂಸ್ಕೃತಿಯ ಭಾಗವಾಗಿರುವ ಈ ಚಿಕಿತ್ಸಾ ಪದ್ಧತಿಯ ಉಪಚಾರದಿಂದ ಆರೋಗ್ಯ ವೃದ್ಧಿಯಾಗಲಿದೆ ಎಂದು ಅಭಿಪ್ರಾಯಪಟ್ಟರು.

ಕಜೆ ಆಯುರ್ವೇದಿಕ್ ಚಾರಿಟೇಬಲ್ ಫೌಂಡೇಷನ್ ಸಂಸ್ಥಾಪಕ ಡಾ.ಗಿರಿಧರ ಕಜೆ, ಈಗಾಗಲೇ ಇರುವ ಹಾಗೂ ಹೊಸದಾಗಿ ಕಾಣಿಸಿಕೊಳ್ಳುವ ರೋಗಗಳ ತಡೆಗೆ ಆಯುರ್ವೇದ ಸಹಕಾರಿ. ಕೋವಿಡ್ ಸಂದರ್ಭದಲ್ಲಿ ಆಯುರ್ವೇದದ ಮಹತ್ವ ಜನರ ಅರಿವಿಗೆ ಬಂದಿದೆ ಎಂದು ಹೇಳಿದರು.

Printed, Published and Owned by K.DEEPAK. Printed at THEJASVI OFFSET PRINTER, NO. 726 SHANKARA NAGAR, CHANDAGALU LAYOUT, MANDYA, KARNATAKA-571401
Published At Address: SHARADA, No. 2979/2, D23/2, 3rd floor, 6th Main, V V Mohalla, Mysore-570002. Editor: K.DEEPAK